

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್ ಕನ್ನಡ ದಿನಪತ್ರಿಕೆ

VOLUME : 2 ISSUE: 130 ಸಂಪುಟ: 02 ಸಂಚಿಕೆ: 130 ಪುಟಗಳು: 04 munjanevarthe 24 MONDAY JUNE 2024 24 ಸೋಮವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

www.munjanevarthe.com


**ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಸ್ಥಾನದ ಆಕಾಂಕ್ಷಿಯಲ್ಲ: ಸಿ.ಟಿ.ರವಿ**

ವಿವರಪುಟ 02

**ತಾಲೂಕಿನ ಆಸ್ಪತ್ರೆಗಳಿಗೆ ಉತ್ತಮ ಸೌಲಭ್ಯ ಒದಗಿಸುವೆ ಶಾಸಕ ಉದಯ್ ಭರವಸೆ**

ವಿವರಪುಟ 03

**ವಿಭಜನೆಯಾಗಿದ್ದ ರೈತ ಸಂಘ ಒಗ್ಗಟ್ಟಾಗಲಿದೆ ಶಾಸಕ ದರ್ಶನ್ ಪುಟ್ಟಣ್ಣಯ್ಯ**

ವಿವರಪುಟ 04



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಇಂದು ಡಿಕೆ ಶಿವಕುಮಾರ್ ಅವರನ್ನು ಗೃಹಕಚೇರಿಯಲ್ಲಿ ಭೇಟಿಯಾದರು.

## ಪ್ರಧಾನಿ ಶೇಖ್ ಹಸೀನಾ ಅವರನ್ನು ಭಾರತಕ್ಕೆ ಸ್ವಾಗತಿಸಲು ಸಂತೋಷವಾಗಿದೆ. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ



## ಸಿಎಂ ತವರಲ್ಲಿ ಅಸ್ಪೃಶ್ಯತೆ ಆಚರಣೆ

ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯನವರ ತವರು ಜಿಲ್ಲೆಯ ವರುಣಾದ ಕಿರಾಳು ಗ್ರಾಮದಲ್ಲಿ ಅಸ್ಪೃಶ್ಯತೆ ಆಚರಣೆ ಬೆಳಕಿಗೆ ಬಂದಿದೆ. ವಿಷಯ ತಿಳಿದು ತಹಶೀಲ್ದಾರ್ ಸ್ಥಳಕ್ಕೆ ಭೇಟಿ ನೀಡಿ, ಗ್ರಾಮದ ಮುಖಂಡರೊಂದಿಗೆ ಮಾತುಕತೆ ನಡೆಸಿ ಅಸ್ಪೃಶ್ಯತೆ ಆಚರಿಸದಂತೆ ಎಚ್ಚರಿಕೆ ನೀಡಿದ್ದಾರೆ. ಈ ಘಟನೆಯ ಬಗ್ಗೆ ನವೀನ್ ಎಂಬವರು ತಹಶೀಲ್ದಾರ್?ಗೆ



ದೂರು ನೀಡಿದ್ದರು. ವಿದ್ಯಾವಂತ ನಾಗರೀಕನಾದ ನನಗೆ ಗ್ರಾಮದ ಶಂಭುಮಹಾಲಿಂಗೇಶ್ವರ ದೇವಸ್ಥಾನಕ್ಕೆ ಪ್ರವೇಶಿಸಲು ಅರ್ಚಕರು ಹಾಗೂ ಗ್ರಾಮಸ್ಥರು ಅವಕಾಶ ನೀಡದೇ ಅಸ್ಪೃಶ್ಯತೆ ಆಚರಿಸುತ್ತಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದರು. ಕೂಡಲೇ ಎಚ್ಚೆತ್ತ ತಹಶೀಲ್ದಾರ್, ವರುಣಾ ಠಾಣೆಯ ಪಿಎಸ್ಐ ಚೇತನ್ ಹಾಗೂ ಇತರೆ ಅಧಿಕಾರಿಗಳೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮಸ್ಥರ ಮನವೊಲಿಸಿ ನಿರ್ಬಂಧ ಹೇರಿದ್ದ ನವೀನ್ ಅವರಿಗೆ ದೇವಸ್ಥಾನಕ್ಕೆ ಪ್ರವೇಶ ಕಲ್ಪಿಸಿದರು. ಅಧಿಕಾರಿಗಳ ಸಮ್ಮುಖದಲ್ಲೇ ನವೀನ್ ದೇವಸ್ಥಾನ ಪ್ರವೇಶಿಸಿ ಪೂಜೆ ಸಲ್ಲಿಸಿದರು. ದೇವಸ್ಥಾನದ ಆವರಣದಲ್ಲೇ ಸಭೆ ಕರೆದು ಅಸ್ಪೃಶ್ಯತೆ ಆಚರಿಸದಂತೆ ಜಾಗೃತಿ ಮೂಡಿಸುವ ಮೂಲಕ ಖಡಕ್ ವಾರ್ನಿಂಗ್ ನೀಡಿದ್ದಾರೆ.

## ರಾಜಕೀಯಕ್ಕೆ ರಾಜಣ್ಣ ಗುಡ್‌ಬೈ!!?



ಬಾಗಲಕೋಟೆ: ಕಾಂಗ್ರೆಸ್ ಶಾಸಕ ಕೆ.ಎನ್ ರಾಜಣ್ಣ ತಮ್ಮ ರಾಜಕೀಯ ಭವಿಷ್ಯದ ಬಗ್ಗೆ ಮಹತ್ವದ ಹೇಳಿಕೆಯೊಂದನ್ನು ನೀಡಿದ್ದಾರೆ. ನಾನು ಮುಂದೆ ಯಾವ ಚುನಾವಣೆಯಲ್ಲೂ ಸ್ಪರ್ಧೆ ಮಾಡುವುದಿಲ್ಲ. ನನಗೆ ಡಿಸಿಎಂ ಹುದ್ದೆಯ ಮೇಲು ಯಾವುದೇ ರೀತಿಯಾದ ಆಸೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಾಜಣ್ಣ ನಾನು ಮುಂದಿನ ದಿನಗಳಲ್ಲಿ ಚುನಾವಣೆಗಳಲ್ಲಿ ಸ್ಪರ್ಧಿಸುವುದಿಲ್ಲ ಎಂದು ಹೇಳಿ ರಾಜಕೀಯ ನಿವೃತ್ತಿಯ ಬಗ್ಗೆ ಸುಳಿವು ನೀಡಿದ್ದಾರೆ. ಜಾತಿ ಆಧಾರದ ಮೇಲೆ ಡಿಸಿಎಂ ಹುದ್ದೆ ನೀಡಬೇಕೆಂಬ ಕೂಗು ಕೇಳಿ ಬರುತ್ತಿರುವ ಬೆನ್ನಲ್ಲೇ ರಾಜಣ್ಣನವರ ಹೇಳಿಕೆ ಮಹತ್ವ ಪಡೆದಿದೆ.

## ಡಿಕೆಶಿ ಎಂಟ್ರಿಯಿಂದ ಮೈತ್ರಿಯಲ್ಲಿ ಜಿಜ್ಞಾಸೆ



ಬೆಂಗಳೂರು: ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ ಪ್ರತಿಷ್ಠೆಯಾಗಿರುವ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಪಕ್ಷದ ನೆಲೆ ಉಳಿಸಿಕೊಳ್ಳುವ ಸವಾಲು ಎದುರಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ ಇದೀಗ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ಕಾಂಗ್ರೆಸ್‌ನಿಂದ ಡಿ.ಕೆ. ಶಿವಕುಮಾರ್ ಅಥವಾ ಅವರ ಸಹೋದರ ಡಿ.ಕೆ. ಸುರೇಶ್ ಕಣಕ್ಕಿಳಿಯುವ ಬಗ್ಗೆ ಚರ್ಚೆ ನಡೆಯುತ್ತಿದೆ. ಇತ್ತ ಬಿಜೆಪಿ ಜೆಡಿಎಸ್ ಮೈತ್ರಿ ಹಿನ್ನೆಲೆಯಲ್ಲಿ ಈ ಕ್ಷೇತ್ರ ಜೆಡಿಎಸ್ ತೆಕ್ಕೆಯಲ್ಲಿಯೇ ಇರಲಿದೆಯೋ ಅಥವಾ ಬಿಜೆಪಿ ಪಾಲಾಗಲಿದೆಯೋ ಎನ್ನುವ ಜಿಜ್ಞಾಸೆ ತಲೆದೂರಿದೆ. ಇಲ್ಲಿ ತ್ಯಾಗಮಯಿ ಯಾರು?. ಯಾರಿಗೆ ಲಾಭವಾಗಲಿದೆ ಎಂಬ ಚರ್ಚೆಗಳು ಸಹ ಜೋರಾಗಿ ನಡೆಯುತ್ತಿವೆ. ಪ್ರತಿಷ್ಠೆಯ ಕಣವಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಅಭ್ಯರ್ಥಿ ಆಯ್ಕೆ ಮಾಡುವುದೇ ಬಿಜೆಪಿ ಹಾಗೂ ಜೆಡಿಎಸ್‌ಗೆ ಸವಾಲಾಗಿ ಪರಿಣಮಿಸಿದೆ. ಎರಡೂ ಪಕ್ಷಗಳಿಂದ ಒಮ್ಮತದ ಅಭ್ಯರ್ಥಿ ಕಣಕ್ಕಿಳಿಸಬೇಕೆಂಬ ಲೆಕ್ಕಾಚಾರ ಎಲ್ಲಾ ನಾಯಕರಲ್ಲೂ ಇದೆ. ಆದರೆ ಕ್ಷೇತ್ರವನ್ನು ಯಾರು ತ್ಯಾಗ ಮಾಡುತ್ತಾರೆ ಎಂಬುದೇ ಯಕ್ಷ ಪ್ರಶ್ನೆಯಾಗಿದೆ. ರಾಮನಗರ ಹೇಳಿಕೇಳಿ ಒಂದು ಕಾಲದಲ್ಲಿ ಜೆಡಿಎಸ್‌ನ ಭದ್ರಕೋಟೆಯಾಗಿತ್ತು. 2018ರಲ್ಲಿ ನಾಲ್ಕು ವಿಧಾನಸಭಾ ಕ್ಷೇತ್ರಗಳ ಪೈಕಿ ಮೂರು ಕ್ಷೇತ್ರಗಳನ್ನು ಗೆದ್ದಿದ್ದರೆ 2023ರಲ್ಲಿ ಬದಲಾದ ರಾಜಕೀಯ ಪರಿಸ್ಥಿತಿಯಿಂದ ಕೇವಲ ಚನ್ನಪಟ್ಟಣದಲ್ಲಿ ಮಾತ್ರ ಜೆಡಿಎಸ್ ಗೆದ್ದಿತ್ತು.

## ದೇವೇಗೌಡರ ಕುಟುಂಬಕ್ಕೆ ಈ ರೀತಿ ಆಗ್ತಿರೋದು ನಮಗೆ ಮುಜುಗರ: ಸಚಿವ ಚಲುವರಾಯಸ್ವಾಮಿ



ಮಂಡ್ಯ: ಶೀಘ್ರದಲ್ಲೇ ನೀರು ಸಲಹಾ ಸಮಿತಿ ಸಭೆ ಕರೆದು ನಾಲೆಗಳಿಗೆ ನೀರು ಹರಿಸುವ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ನಾವು ನಿರೀಕ್ಷಿಸಿದ ಮಟ್ಟದಲ್ಲಿ ಮೇಲಿಂದ ನೀರು ಹರಿದು ಬರ್ತಿಲ್ಲ. ಭತ್ತ ನಾಟಿ ಮಾಡಲು ಜುಲೈ 15ರ ವರೆಗೂ ಟೈಂ ಇದೆ. ಹಾಗಾಗಿ ನಾವು ನಿರೀಕ್ಷೆ ಇಟ್ಟುಕೊಳ್ಳೋಣ. ಮಳೆ ಬಂದು ಡ್ಯಾಂ ನೀರಿನ ಮಟ್ಟ 110 ಅಡಿಗೆ ಏರಿದ್ರೆ ಸಮಸ್ಯೆ ಇರೋದಿಲ್ಲ. ಆದ್ರೆ ಈಗ ರೈತರು ನೀರು ಕೇಳ್ತಿರೋದು ಕೆರೆ ಕಟ್ಟೆ ತುಂಬಿಸಿಕೊಳ್ಳಲು. ಹಾಗಾಗಿ ಶೀಘ್ರವಾಗಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದರು.

## ಇಸ್ರೋ ಮತ್ತೊಂದು ಮೈಲಿಗಲ್ಲು

ಚಿತ್ರದುರ್ಗ: ಮರುಬಳಕೆ ಉಡಾವಣಾ ವಾಹನದ ಲ್ಯಾಂಡಿಂಗ್ ಪ್ರಯೋಗದ (ಎಲ್‌ಇಎಕ್ಸ್) ಅಂತಿಮ ಪ್ರಯೋಗವನ್ನು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ– ISRO) ಭಾನುವಾರ ಯಶಸ್ವಿಯಾಗಿ ನಡೆಸಿದೆ. ಕರ್ನಾಟಕದ ಚಿತ್ರದುರ್ಗದಲ್ಲಿರುವ ಏರೋನಾಟಿಕಲ್ ಟೆಸ್ಟ್ ರೇಂಜ್‌ನಲ್ಲಿ ಬೆಳಗ್ಗೆ 07:10ಕ್ಕೆ 'ಪುಷ್ಪಕ್' ನೌಕೆಯ ಪ್ರಯೋಗ ನಡೆಸಲಾಗಿದೆ. ಇದು ಲ್ಯಾಂಡಿಂಗ್ ಸಾಮರ್ಥ್ಯವನ್ನು ಪ್ರದರ್ಶಿಸುವ ಎಲ್‌ಇಎಕ್ಸ್–03 ತಂತ್ರಜ್ಞಾನದ ಸರಣಿಯಲ್ಲಿ ಅಂತಿಮ ಹಾಗೂ ಸತತ ಮೂರನೇ ಯಶಸ್ವಿ ಪ್ರಯೋಗವಾಗಿದೆ. ವೇಗವು 260 kmph ಮತ್ತು ಸಾಮಾನ್ಯ ಯುದ್ಧ ವಿಮಾನದ ವೇಗವು 280 kmph ಇರುತ್ತದೆ ಎಂದು ಇಸ್ರೋ ಹೇಳಿದೆ.

## ಬಿಬಿಎಂಪಿ 5 ಭಾಗ ಮಾಡಲು ತಯಾರಿ



ಬೆಂಗಳೂರು: ಆಡಳಿತ ದೃಷ್ಟಿಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ)ಯನ್ನು ಐದು ವಿಭಾಗಗಳನ್ನಾಗಿ ಮಾಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಆದರೆ, ಇದೀಗ ವಿಭಜನೆಗೆ ಕಾಂಗ್ರೆಸ್ಸಿಗರಿಂದಲೇ ವಿರೋಧ ವ್ಯಕ್ತವಾಗಿದೆ. ಕಾಂಗ್ರೆಸ್ ಮಾಜಿ ಮೇಯರ್ ಹಾಗೂ ಉಪ ಮೇಯರ್‌ಗಳಿಂದ ರಾಜ್ಯ ಸರ್ಕಾರ ನಡೆಗೆ ವಿರೋಧ ವ್ಯಕ್ತವಾಗಿದ್ದು, ಯಾವುದೇ ಕಾರಣಕ್ಕೂ ಬಿಬಿಎಂಪಿ ವಿಭಜನೆ ಮಾಡಬೇಡಿ ಎಂದು ಸಲಹೆ ನೀಡಿದ್ದಾರೆ. ಬಿಬಿಎಂಪಿ ಚುನಾವಣೆ ತಯಾರಿಗಾಗಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ನಡೆಸಿದ ಸಭೆಯಲ್ಲಿ ಕೆಲ ಮಾಜಿ ಮೇಯರ್‌ಗಳು, ಬಿಬಿಎಂಪಿ ವಿಭಜನೆಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ನಡೆದ ಮಾಜಿ ಮೇಯರ್, ಉಪ ಮೇಯರ್‌ಗಳ ಸಭೆಯಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆಶಿಗೆ ಸಲಹೆ ನೀಡಿದ್ದಾರೆ. ಅಲ್ಲದೇ ಯಾಕೆ ವಿಭಜನೆ ಬೇಡ ಎನ್ನುವುದು ಸೇರಿ ಕೆಲ ಮಹತ್ವ ಅಂಶಗಳ ಮಾಹಿತಿ ಕಲೆ ಹಾಕಲು ಮಾಜಿ ಮೇಯರ್ , ಉಪಮೇಯರ್‌ಗಳ ನೇತೃತ್ವದಲ್ಲಿ ಸಮಿತಿ ರಚನೆಗೆ ನಿರ್ಧಾರ ಮಾಡಲಾಗಿದೆ.

## ರೇಣುಕಾಸ್ವಾಮಿ ಕೊಲೆ ಪ್ರಕರಣ

ಬೆಂಗಳೂರು: ಚಿತ್ರದುರ್ಗದ ಯುವಕ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್ ಸೇರಿದಂತೆ 17 ಆರೋಪಿಗಳು ಪರಪ್ಪನ ಅಗ್ರಹಾರ ಜೈಲು ಸೇರಿದ್ದಾರೆ. ನಟ ದರ್ಶನ್, ಪವಿತ್ರಾ ಗೌಡ, ಪವನ್, ರಾಘವೇಂದ್ರ, ನಂದೀಶ್, ಜಗದೀಶ್, ಅನುಕುಮಾರ್, ರವಿಶಂಕರ್, ಧನರಾಜ್, ವಿನಯ್, ನಾಗರಾಜು, ಲಕ್ಷ್ಮಣ, ದೀಪಕ್, ಪ್ರದೂಶ್, ಕಾರ್ತಿಕ್, ಕೇಶವಮೂರ್ತಿ ಹಾಗೂ ನಿಖಿಲ್ ನಾಯ್ಕ್ ಎಂಬ ಆರೋಪಿಗಳನ್ನು ಕಾಮಾಕ್ಷಿಪಾಳ್ಯ ಠಾಣಾ ಪೊಲೀಸರು ಬಂಧಿಸಿದ್ದರು.



## ಲೋಕಸಭೆ ಚುನಾವಣೆಯಲ್ಲಿ ಸಿಕ್ಕಿದ ಗೆಲುವು



ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ ಮೈತ್ರಿ ಮಾಡಿಕೊಂಡು ಯಶಸ್ಸಿನ ರುಚಿ ಕಂಡಿರುವ ಬಿಜೆಪಿ ಮತ್ತು ಜೆಡಿಎಸ್ ನಾಯಕತ್ವ ಬಿಬಿಎಂಪಿ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣೆಗೆ ಸಹ ಒಟ್ಟಾಗಿ ಮುಂದುವರಿಯಲು ಸಜ್ಜಾಗಿವೆ. ರಾಜ್ಯಾದ್ಯಂತ ಎರಡೂ ಪಕ್ಷಗಳ ಪ್ರಮುಖ ನೆಲೆಗಳನ್ನು ಬಲಪಡಿಸಲು ಈ ಚುನಾವಣೆಗಳು ನಿರ್ಣಾಯಕವಾಗಿದ್ದು,

ಪುಟ 2ಕ್ಕೆ


ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

2

# ಮುಂಜಾನೆ ವಾರ್ತೆ

ಕನ್ನಡ ದಿನಪತ್ರಿಕೆ

ಇ-ಪೇಪರ್: www.munjanevarth.com
ಸೋಮವಾರ 24 ಜೂನ್ 2024
MONDAY 24 June 2024

## ಲೋಕಸಭೆ ಚುನಾವಣೆಯಲ್ಲಿ ಸಿಕ್ಕಿದ ಗೆಲುವು

ಪುಟ 1ರಿಂದ

ಕರ್ನಾಟಕದಲ್ಲಿ ಮುಂದಿನ ವಿಧಾನಸಭೆ ಚುನಾವಣೆಯವರೆಗೆ ತಮ್ಮ ಮೈತ್ರಿಯನ್ನು ಮುಂದುವರೆಸುವ ಸಾಧ್ಯತೆಯನ್ನು ಪಕ್ಷಗಳು ನೀಡುತ್ತಿವೆ.

ಮುಂಬರುವ ಚುನಾವಣೆಗೆ ತಯಾರಿ ನಡೆಸುತ್ತಿರುವ ಆಡಳಿತಾರೂಢ ಕಾಂಗ್ರೆಸ್‌ನ್ನು ಮಣಿಸಲು ಎರಡೂ ಪಕ್ಷಗಳು ಪಣ ತೊಟ್ಟಿವೆ.

ಐವರು ಸಚಿವರು ಸೇರಿದಂತೆ 19 ಎನ್‌ಡಿಎ ಸಂಸದರಿಗೆ ರಾಜ್ಯ ಬಿಜೆಪಿ ಘಟಕವು ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಅಭಿನಂದನಾ ಸಮಾರಂಭ ಎರಡು ಪಕ್ಷಗಳ ಭವಿಷ್ಯದ ರಾಜಕೀಯ ಪ್ರಯತ್ನಕ್ಕೆ ಸಾಕ್ಷಿಯಾಗಿದ್ದು, ಮೈತ್ರಿ ಮುಂದುವರಿಕೆಗೆ ಬಿಜೆಪಿ ವರಿಷ್ಠರು ಮುಂದಾಗಿದ್ದಾರೆ ಎಂಬುದರ ಸೂಚನೆಯಾಗಿದೆ.

ಪಕ್ಷದ ಕಾರ್ಯಕರ್ತರಿಗೆ ಶಕ್ತಿ ತುಂಬುವ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳು ಮುಂದೆ ಬರಲಿವೆ. ಅದನ್ನು ಜವಾಬ್ದಾರಿಯುತವಾಗಿ ನಿಭಾಯಿಸಬೇಕು. ಎಲ್ಲರೂ ಶ್ರಮಿಸೋಣ. ವಿಧಾನಸಭೆ ಅಧಿವೇಶನದಲ್ಲಿಯೂ ಒಟ್ಟಾಗಿ ಕಾಂಗ್ರೆಸ್‌ನ ದುರಹಂಕಾರವನ್ನು ಮುರಿಯುತ್ತೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಹೇಳಿದ್ದಾರೆ.

ಮುಂದಿನ ಚುನಾವಣೆಗೆ ಪಕ್ಷವನ್ನು ಸಂಘಟಿಸಲು ವಿಧಾನಸಭೆ ಅಧಿವೇಶನದ ನಂತರ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳುತ್ತೇನೆ ಎಂದರು. ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯಕ್ಕೆ ಐದು ಕೇಂದ್ರ ಸಚಿವ ಸ್ಥಾನಗಳನ್ನು ನೀಡಿದ್ದು, ಸಂಸದರೊಂದಿಗೆ ಸೇರಿ ರಾಜ್ಯಕ್ಕೆ ಆಗಬೇಕಾದ ಕೆಲಸಗಳ ಬಗ್ಗೆ ಗಮನ ಹರಿಸಲಾಗುವುದು ಎಂದು ಹೇಳಿದರು.

ಬಿಬಿಎಂಪಿ, ಜಿಪಂ, ತಾ.ಪಂ ಮತ್ತು ಗ್ರಾಮ ಪಂಚಾಯಿತಿ ಚುನಾವಣೆಗೆ ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಬಿಜೆಪಿ ಕೇಂದ್ರ ಸಂಸದೀಯ ಮಂಡಳಿ ಸದಸ್ಯ ಹಾಗೂ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹೇಳಿದ್ದಾರೆ. ಜೆಡಿಎಸ್ ಜೊತೆಗೂಡಿ ಗೆಲ್ಲಿಸುವ ಮೂಲಕ ನಮ್ಮ ಶಕ್ತಿ ಪ್ರದರ್ಶನ ಮಾಡಬೇಕು ಎಂದರು.

ಕಾಂಗ್ರೆಸ್‌ನ ಸುಳ್ಳು ಭರವಸೆಗಳು, ಭ್ರಷ್ಟಾಚಾರ, ದುರಾಡಳಿತ ಮತ್ತು ಅಭಿವೃದ್ಧಿಯ ಕೊರತೆಯನ್ನು ಜನರೊಂದಿಗೆ ಎತ್ತಿ ತೋರಿಸಬೇಕು ಎಂದು ಯಡಿಯೂರಪ್ಪ ಹೇಳಿದರು. ಮತಾಂಧರನ್ನು ಗುರಿಯಾಗಿಸಿಕೊಂಡು ಸುಳ್ಳು ಭರವಸೆಗಳನ್ನು ನೀಡಿದರೂ, ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಎರಡಂಕಿಯ ಸ್ಥಾನಗಳನ್ನು ಗಳಿಸಲು ಸಾಧ್ಯವಾಗಲಿಲ್ಲ ಎಂದು ಅವರು ಹೇಳಿದರು. ಎರಡೂ ಪಕ್ಷಗಳ ನಾಯಕರು ಸೌಹಾರ್ದಯುತವಾಗಿ ಸೀಟು ಹಂಚಿಕೆ ಮ್ಯಾಟ್ರಿಕ್ಸ್ ನಡೆಸುವುದರಿಂದ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣೆಯಲ್ಲಿ ಮೈತ್ರಿ ಕಾರ್ಯರೂಪಕ್ಕೆ ಬರಲಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ ಸೋಮಣ್ಣ ಹೇಳಿದರು.

ಇಂಧನ ಬೆಲೆ ಏರಿಕೆ ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್‌ಗೆ ಮರಣಶಾಸನವಾಗಿದೆ ಎಂದು ಪ್ರತಿಪಕ್ಷದ ನಾಯಕ ಆರ್.ಅಶೋಕ ವಾಗ್ದಾಳಿ ನಡೆಸಿದರು. ವಿಧಾನಸಭಾ ಚುನಾವಣೆ ಮುಗಿದ ಕೇವಲ ಒಂದು ವರ್ಷದೊಳಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ ಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಲೋಕಸಭಾ ಚುನಾವಣಾ ಫಲಿತಾಂಶ ಸ್ಪಷ್ಟ ಹೊಡೆತ ನೀಡಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಮತ್ತು ಶಿವಕುಮಾರ್ ರಾಜೀನಾಮೆ ನೀಡಬೇಕಿತ್ತು. ಭ್ರಷ್ಟ, ಹಿಂದೂ ವಿರೋಧಿ ಕಾಂಗ್ರೆಸ್ ಸರಕಾರವನ್ನು ಕಿತ್ತೊಗೆಯಲು ನಾವು ಶ್ರಮಿಸಬೇಕು ಎಂದು ಹೇಳಿದರು.




## ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಸ್ಥಾನದ ಆಕಾಂಕ್ಷಿಯಲ್ಲ: ಸಿ.ಟಿ.ರವಿ

ಬೆಂಗಳೂರು : ನಾನು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಸ್ಥಾನದ ಆಕಾಂಕ್ಷಿಯಲ್ಲ, ಕ್ಯಾಪ್ಟನ್ ಆದರೂ ಸೆಂಚುರಿ ಬಾರಿಸಬಹುದು. ಪ್ಲೇಯರ್ ಆದರೂ ಸೆಂಚುರಿ ಬಾರಿಸಲು ಅವಕಾಶವಿದೆ. ಒಂದು ಟೀಂ ಆಗಿ ಕೆಲಸ ಮಾಡುತ್ತೇವೆ ಎಂದು ವಿಧಾನ ಪರಿಷತ್‌ಗೆ ಆಯ್ಕೆಯಾಗಿರುವ ನೂತನ ಸದಸ್ಯ ಸಿ ಟಿ ರವಿ ಸ್ಪಷ್ಟಪಡಿಸಿದ್ದಾರೆ.

ಮಲ್ಲೇಶ್ವರದಲ್ಲಿರುವ ರಾಜ್ಯ ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾಳೆ ವಿಧಾನಪರಿಷತ್ ಸದಸ್ಯರಾಗಿ 17 ಜನರಿಗೆ ಸಭಾಪತಿಗಳು ಪ್ರಮಾಣವಚನ ಭೋದನೆ ಮಾಡಲಿದ್ದಾರೆ. ಬ್ಯಾಂಕ್ವೆಟ್ ಹಾಲ್ ನಲ್ಲಿ ಪ್ರಮಾಣ ವಚನ ಬೋಧನೆ ಮಾಡಲಿದ್ದಾರೆ. ಪರಿಷತ್ ವಿಪಕ್ಷ ನಾಯಕನ ಆಯ್ಕೆ ವಿಚಾರ ಚರ್ಚೆಯಲ್ಲಿರುವುದು ನಿಜ. ಆದರೆ, ನಾನು ಆ ಸ್ಥಾನದ ಆಕಾಂಕ್ಷಿ ಏನೂ ಅಲ್ಲ. ಪಕ್ಷ ನನ್ನನ್ನು ಮೇಲ್ಮನೆಗೆ ಕಳಿಸಿದೆ. ಪಕ್ಷ ಜವಾಬ್ದಾರಿ ನೀಡಿದೆ ಎಂದರು.

ವಿಧಾನಪರಿಷತ್ ಸದಸ್ಯನಾಗಿ ರಾಜ್ಯದ ಜನರ ಹಿತದೃಷ್ಟಿಯಿಂದ ಸದನದಲ್ಲಿ ಎಲ್ಲಾ ವಿಚಾರ ಚರ್ಚೆ ಮಾಡುವ ಅವಕಾಶ ಇದೆ. ವಿಪಕ್ಷ ನಾಯಕನಾಗಿ ಆಯ್ಕೆ ಪಕ್ಷಕ್ಕೆ ಬಿಟ್ಟಿದ್ದು. ನಾಯಕನಾಗಿಯಾದರೂ ಪ್ಲೇಯರ್ ಆಗಿಯಾದರೂ ಸೆಂಚುರಿ ಹೊಡೆಯೋಕೆ ಅವಕಾಶ ಇದೆ. ಮೆರಿಟ್ ಅಂದರೆ ಮೆರಿಟ್, ಪ್ರಾಬ್ಲಮ್ ಅಂದ್ರೆ ಪ್ರಾಬ್ಲಮ್. ಒಂದು ತಂಡವಾಗಿ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.

ಕಾಂಗ್ರೆಸ್‌ನಲ್ಲಿ ಜಾತಿಗೊಂದು ಡಿಸಿಎಂ ವಿಚಾರದ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಅದು ಕಾಂಗ್ರೆಸ್ ಒಳಗಿನ ವಿಚಾರ, ಅವರಿಗೆ ಬಿಟ್ಟಿದ್ದು. ಡಿಸಿಎಂ ಎಷ್ಟು ಮಾಡಬೇಕು ಅನ್ನೋದು ಅವರ ಪಕ್ಷಕ್ಕೆ ಬಿಟ್ಟಿದ್ದು. ಜಾತಿಗೊಂದು ಡಿಸಿಎಂ ಅಂತಿದ್ದಾರೆ.

ನಾವು ಪ್ರಮಾಣವಚನ ಸ್ವೀಕಾರ ಮಾಡೋದೇ ಜಾತಿ, ರಾಗ, ದ್ವೇಷ ಇಲ್ಲದಿರಲಿ ಅಂತ. ಚರ್ಚೆಗೆ ಅದು ಕಾರಣ ಆಗಬಾರದು ಎಂದರು.

ಎರಡೂವರೆ ವರ್ಷಕ್ಕೆ ಅಧಿಕಾರ ಬದಲಾವಣೆ ಅಂತ ಮಾಡಿಕೊಂಡಿದ್ದರೆ ಸಂವಿಧಾನದಲ್ಲಿ ಅವಕಾಶ ಇದೆ. ಸಿದ್ದರಾಮಯ್ಯ ಇಳಿಸಬೇಕು ಅನ್ನೋದು ನಮ್ಮ ರಾಜಕಾರಣ ಅಲ್ಲ. ನಾವು ಡಿ. ಕೆ ಶಿವಕುಮಾರ್ ಅವರನ್ನ ಟಾರ್ಗೆಟ್ ಕೂಡ ಮಾಡಿಲ್ಲ. ರಾಜಕಾರಣ ನಿಂತ ನೀರಲ್ಲ ಅನ್ನೋದು ತಿಳಿದಿದೆ. ಬಹುಮತ ಏನಾದರೂ ಇರಬಹುದು. ಶಾಸಕರಿಗೆ ಪಕ್ಷದಲ್ಲಿ ಇರಲು ಇಚ್ಛೆ ಇಲ್ಲ ಅಂದರೆ ಯಾರು ಏನು ಮಾಡಲು ಸಾಧ್ಯ? ಎಂದು ಪ್ರಶ್ನಿಸಿದರು.

ಸರ್ಕಾರ ರಚಿಸುವ ಸಂಖ್ಯೆ ನಮ್ಮಲ್ಲಿಲ್ಲ: ಕೇಂದ್ರ ಸಚಿವ ವಿ ಸೋಮಣ್ಣ ಅವರು ಸರ್ಕಾರ ಬೀಳಿಸುವ ಹೇಳಿಕೆ ವಿಚಾರದ ಕುರಿತು ಪ್ರತಿಕ್ರಿಯೆ ನೀಡಿದ ಸಿ



ಟಿ ರವಿ, ಬಿಜೆಪಿಯಿಂದ ಯಾವುದೇ ಆಪರೇಷನ್ ಮಾಡಲ್ಲ. ನಮ್ಮ ಬಳಿ ಸರ್ಕಾರ ಮಾಡುವಷ್ಟು ನಂಬರ್ ಕೂಡ ಇಲ್ಲ. ಸರ್ಕಾರ ಬಂದು 14 ತಿಂಗಳ ಅಧಿಕಾರ ನೋಡಿದ್ದೀರಿ. ಬಿಹಾರದಂತ ರಾಜ್ಯದಲ್ಲಿ ಕ್ರೈಮ್ ರೇಟ್ ಕಡಿಮೆ ಆಗುತ್ತಿದೆ. ಆದರೆ ಕರ್ನಾಟಕದಲ್ಲಿ ಕ್ರೈಮ್ ರೇಟ್ ಜಾಸ್ತಿ ಆಗುತ್ತಿದೆ. ಅಧಿಕಾರದಲ್ಲಿ ಇರೋರು ನಾನೆಷ್ಟು ಲೂಟಿ ಮಾಡಲಿ ಅಂತ ಪೈಪೋಟಿಗೆ ಬಿದ್ದಿದ್ದಾರೆ ಎಂದರು.

ಸಿದ್ದರಾಮಯ್ಯ ಅವರಲ್ಲಿ ಮೊದಲ ಗತ್ತು ಕಾಣುತ್ತಿಲ್ಲ. ನಮ್ಮದೆಲ್ಲ ಮುಗೀತು, ಯಾರನ್ನ ಸೆಟಲ್ ಮಾಡಬೇಕು ಅನ್ನೋ ಹಂತಕ್ಕೆ ಬಂದಿದ್ದಾರೆ. ಈ ಒಂದು ಕೆಲಸ ಮಾಡಿದರೆ ಜಾಬ್ ಕ್ರಿಯೇಟ್ ಆಗುತ್ತದೆ. ರೈತರಿಗೆ ಅನುಕೂಲ ಆಗಲಿದೆ ಅನ್ನೋ ಒಂದೇ ಒಂದು ನಿರ್ಣಯ ತೋರಿಸಿ. ನಾವ್ಯಾರು ಈ ಸರ್ಕಾರಕ್ಕೆ ಒಳ್ಳೆ ಸರ್ಟಿಫಿಕೆಟ್ ಕೊಡಲ್ಲ. ಜನರೂ ಕೂಡ ಕೊಡಲ್ಲ. ಅವರು ಒಳ್ಳೆಯ ಆಡಳಿತ ಕೊಟ್ಟಿದ್ದರೆ ನಾವು ಒಂದೂ ಸೀಟು ಗೆಲ್ಲುತ್ತಿರಲಿಲ್ಲ. ಅವರ ಕೆಟ್ಟ ಆಡಳಿತದ ಪರಿಣಾಮ ಎನ್?ಡಿಎಗೆ 19 ಸೀಟು ಬಂದಿದೆ ಎಂದು ತಿಳಿಸಿದರು.

ವಿಧಾನ ಪರಿಷತ್? ಸದಸ್ಯ ಸೂರಜ್ ರೇವಣ್ಣ ಬಂಧನ ವಿಚಾರ ಸಂಬಂಧ ಪಾಪ ಪುಣ್ಯ ನನಗೆ ಗೊತ್ತಿಲ್ಲ. ಅಂತರಾತ್ಮ, ಪರಮಾತ್ಮ ಅನ್ನೋದು ಇರುತ್ತದೆ. ನೆಲದ ಕಾನೂನು ಎಲ್ಲರಿಗೂ ಒಂದೇ. ಪಾಪ, ಪುಣ್ಯ ಅಂತ ಇದ್ದರೆ ಅದು ಅನ್ವಯ ಆಗಲಿದೆ ಎಂದು ತಿಳಿಸಿದರು.

ಹೆಚ್‌ಡಿಕೆ ಪರ ಬ್ಯಾಟ್ ಬೀಸಿದ ಸಿ ಟಿ ರವಿ : ಗಣಿ ಅನುಮತಿ ವಿಚಾರವಾಗಿ ಕುಮಾರಸ್ವಾಮಿ ವಿರುದ್ಧ ನಿಂತ ರಾಜ್ಯ ಸರ್ಕಾರ ವಿಚಾರದ ಕುರಿತು ಪ್ರತಿಕ್ರಿಯೆ ನೀಡಿದ ಸಿ ಟಿ ರವಿ, ನನಗೆ ಅರ್ಥ ಆಗುತ್ತಿಲ್ಲ.

ಅವರು ಸಹಿ ಹಾಕಿರೋದು ಸರ್ಕಾರಿ ಸಂಸ್ಥೆಯದ್ದು, ಅದರಲ್ಲಿ ಕಿಕ್ ಬ್ಯಾಕ್ ಕೊಡಲ್ಲ. ಕಾಂಗ್ರೆಸ್ ಕಿಕ್ ಬ್ಯಾಕ್ ಪಡೆಯೋಕೆ ಯೋಚನೆ ಮಾಡುತ್ತಿರಬಹುದು. ಕಾಂಗ್ರೆಸ್‌ನವರ ಬಾಲಿಶ ಹೇಳಿಕೆ ಗಮನಿಸಿದೆ. ಖಾಸಗಿ ಸಂಸ್ಥೆ ನಿಯಮ ತಂದರು.

ಜಿಂದಾಲ್ ಕನ್ನಡಿಗರಿಗೇ ಉದ್ಯೋಗ ಕೊಡೋದು ಅಂದರು. ಎಷ್ಟು ಜನ ಕನ್ನಡಿಗರಿಗೆ ಉದ್ಯೋಗ ಕೊಟ್ಟಿದ್ದಾರೆ? ಸೂಟ್?ಕೇಸ್ ಕೊಡಲಿ ಅಂತ ಬಯಸಿದರೆ, ಅಲ್ಲಿ ಉದ್ಯೋಗ ಸಿಗಲ್ಲ. ಸರ್ಕಾರಿ ಸಂಸ್ಥೆ ಯಾವುದೂ ಕಿಕ್ ಬ್ಯಾಕ್ ಕೊಡಲ್ಲ ಅನ್ನೋದು ಅವರಿಗೆ ತಿಳಿದಿಲ್ಲ ಎಂದು ಕೈ ನಾಯಕರ ಆರೋಪಗಳಿಗೆ ತಿರುಗೇಟು ನೀಡಿ ಹೆಚ್?ಡಿಕೆ ಪರ ಬ್ಯಾಟಿಂಗ್ ಮಾಡಿದರು.

## ಕರ್ನಾಟಕ ಚಾಲಕರ ಒಕ್ಕೂಟ ತಾಲ್ಲೂಕು ಸಮಿತಿ ಉದ್ಘಾಟನೆ




ಯಾದಗಿರಿ; ನಗರದ ವಾಲ್ಮೀಕಿ ಭವನದಲ್ಲಿ ಕರ್ನಾಟಕ ಚಾಲಕರ ಒಕ್ಕೂಟ ತಾಲೂಕ್ ಸಮಿತಿ ಉದ್ಘಾಟನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕರ್ನಾಟಕ ಚಾಲಕರ ಒಕ್ಕೂಟ ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷರು ಡಾ ಜಿ ನಾರಾಯಣಸ್ವಾಮಿ ಅವರನ್ನು ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮೂಲಕ ಕಾರ್ಯಕ್ರಮಕ್ಕೆ ಸ್ವಾಗತ ಮಾಡಿಕೊಂಡರು. ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಡಾ. ಜಿ ನಾರಾಯಣಸ್ವಾಮಿ ಯಾದಗಿರಿ ಸ್ಥಳೀಯ ಶಾಸಕ ತುನ್ನೂರು ಚನ್ನ ರೆಡ್ಡಿ ಪಾಟೀಲ್ ಕೈ ಜೋಡಿಸುವ ಮೂಲಕ ಜ್ಯೋತಿ ಬೆಳಗಿಸುವು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರು ಬಸ್ಸು ಗೌಡ ನೂತನ ತಾಲೂಕು ಅಧ್ಯಕ್ಷರು ಮತ್ತು ತಾಲೂಕು ಪ್ರಧಾನ ಕಾರ್ಯದರ್ಶಿಗಳು ತಾಲೂಕು ಪ್ರಚಾರ ಸಮಿತಿ ಅಧ್ಯಕ್ಷರು ಸಿದ್ದರಾಮ ಕಣೆಕಲ್ ಮತ್ತು ಇನ್ನಿತರರು ಇದ್ದರು.

ವರದಿ: ಮಲ್ಲಿಕಾರ್ಜುನ ಕುಂಬಾರಳ್ಳಿ
ಯಾದಗಿರಿ ಜಿಲ್ಲೆ

## ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ

### ಸಲ್ಲಿಕೆಯಾಗುವ ಕಮಿಷನ್ ಕಳೆದ 4 ತಿಂಗಳುಗಳಿಂದ ವಿತರಣೆಯಾಗಿಲ್ಲ

ಕೊರಟಗೆರೆ :- ಸರ್ಕಾರದ ಮಹತ್ವಕಾಂಕ್ಷಿಯ ಯೋಜನೆಯಲ್ಲೊಂದಾದ ಅನ್ನಭಾಗ್ಯ ಯೋಜನೆಯ ಅಡಿಯಲ್ಲಿ ವಿತರಣೆಯಾಗುವ ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಸಲ್ಲಿಕೆಯಾಗುವ ಕಮಿಷನ್ ಕಳೆದ 4 ತಿಂಗಳಗಳಿಂದ ವಿತರಣೆಯಾಗಿಲ್ಲ, ಕಳೆದ ಒಂದುವರೆ ವರ್ಷಗಳ ಹಿಂದೆ ಮಾಡಲಾದ ಇಕೆವೈಸಿ ಹಣ ಸಹ ಈವರೆಗೂ ಬಿಡುಗಡೆಗೊಂಡಿಲ್ಲ ದಯಮಾಡಿ ತ್ವರಿತವಾಗಿ ಹಣ ಬಿಡುಗಡೆಗೊಳಿಸಬೇಕು ಎಂದು ತುಮಕೂರು ಜಿಲ್ಲಾಧಿಕಾರಿ ಶುಭಕಲ್ಯಾಣ್ ಅವರಿಗೆ ಕೊರಟಗೆರೆ ಸರ್ಕಾರಿ ನ್ಯಾಯ ಬೆಲೆ ಅಂಗಡಿ ಮಾಲೀಕರ ಸಂಘ ಒತ್ತಾಯಿಸಿತು.



ಕೊರಟಗೆರೆಯಲ್ಲಿ ಆಯೋಜನೆಗೊಳಿಸಲಾಗಿದ್ದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರಿಗೆ ಕೊರಟಗೆರೆ ತಾಲೂಕಿನ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ಅಧ್ಯಕ್ಷರಾದ ಚಿಕ್ಕರಂಗಯ್ಯ, ನಿರ್ದೇಶಕರಾದ ಗೊಂದಿಹಳ್ಳಿರಂಗರಾಜು ಸೇರಿದಂತೆ ನ್ಯಾಯಬೆಲೆ ಅಂಗಡಿ ಮಾಲೀಕರು ಮನವಿ ಮಾಡಿಕೊಂಡಿದ್ದಾರೆ.

ಸಾರ್ವಜನಿಕ ಸೇವೆಯಲ್ಲಿ ಬಹು ಮುಖ್ಯ ಪಾತ್ರ ವಹಿಸುವ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಲ್ಲೊಂದಾದ ಅನ್ನಭಾಗ್ಯ ಯೋಜನೆ ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ಸಮರ್ಪಕವಾಗಿ ಯೋಜನೆಯ ಸೌಲತ್ತು ವಿತರಣೆ ಗೊಳ್ಳುತ್ತಿದ್ದು, ಅನ್ನ ಭಾಗ್ಯ ಯೋಜನೆ ಅನುಷ್ಠಾನ ಕೋವಿಡ್ ನಂತಹ ಭೀಕರ ಸಾಂಕ್ರಾಮಿಕ ರೋಗದ ಸಂದರ್ಭದಲ್ಲೂ ನ್ಯಾಯಬೆಲೆ ಅಂಗಡಿ ಮಾಲೀಕರು ತಮ್ಮ ಜೀವವನ್ನು ಲೆಕ್ಕಿಸದೆ ಸಾರ್ವಜನಿಕರೊಂದಿಗೆ ನಿಕಟ ಸಂಪರ್ಕ ಹೊಂದಿ ಹೆಬ್ಬೆಟ್ಟು ಇಡಿಸುಕೊಳ್ಳುವ ಸಂದರ್ಭದಲ್ಲಿ ಬಹಳಷ್ಟು ಜನ ಕೋವಿಡ್ ಸೋಂಕು ತಗಲುವ ಭೀತಿಯಲ್ಲಿದ್ರು ಅಂತಹ ಸಂಕಷ್ಟ ಕಾಲದಲ್ಲೂ ಅನ್ನಭಾಗ್ಯ ಯೋಜನೆಯೆಲ್ಲಿ ಯಾವುದೇ ಸಮಸ್ಯೆ ಆಗದಂತೆ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಿರುವ ನ್ಯಾಯಬೆಲೆ ಅಂಗಡಿಗಳಿಗೆ ಕಮಿಷನ್ ವಿತರಣೆಯಲ್ಲಿ ಪ್ರತಿ ತಿಂಗಳು ವಿತರಿಸದೆ ಮೀನಾ ಮೇಷ ಎಣಿಸುತ್ತಿರುವುದು ಸಮಂಜಸವಲ್ಲ ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿಕೊಂಡಿದ್ದಾರೆ.

ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಬಹಳಷ್ಟು ಸಮಸ್ಯೆಗಳಿದ್ದು, ಪ್ರತಿ ತಿಂಗಳು ಪ್ರತಿ ಕಾರ್ಡುದಾರರಿಂದ ಹೆಬ್ಬೆಟ್ಟು ಪಡಿದು ಅಕ್ಕಿ ವಿತರಣೆ ಮಾಡುವ ಸಂದರ್ಭದಲ್ಲಿ ಇಂಟರ್ನೆಟ್ ಪ್ರಾಬ್ಲಮ್ ಜೋತೆಗೆ ಪ್ರತಿ ತಿಂಗಳು ಅಂಗಡಿ ಬಾಡಿಗೆ, ಇಂಟರ್ನೆಟ್ ಚಾರ್ಜ್, ಒಬ್ಬ ಕೂಲಿಗಾರನ ಸಹಕಾರ ಸೇರಿದಂತೆ ಸರಿಸುಮಾರು ಪ್ರತಿ ನ್ಯಾಯಬೆಲೆ ಅಂಗಡಿಯಲ್ಲೂ 5-6 ಸಾವಿರ ಖರ್ಚು ಸಾಮಾನ್ಯವಾಗಿದೆ , ಈಗಿರುವಾಗ ಕಳೆದ ನಾಲ್ಕು ತಿಂಗಳ ಗಳಿಂದ ಕಮಿಷನ್ ವಿತರಣೆ ಗೊಳಿಸದೇ ಇರುವುದು ಜೊತೆಗೆ ಕಳೆದ ಒಂದು ವರ್ಷಗಳ ಹಿಂದೆ ಪ್ರತಿ ಕಾಡುದಾರರ ಸಂಪೂರ್ಣ ಮಾಹಿತಿಗಾಗಿ ಇಕೆವೈಸಿ ಬಾಪ್ತು ಈವರೆಗೂ ಹಣ ಸಂದಾಯಗೊಳಿಸದೆ ಇರುವುದು ನ್ಯಾಯಬೆಲೆ ಅಂಗಡಿ ಮಾಲೀಕರು ಸಂಕಷ್ಟದಲ್ಲಿದ್ದಾರೆ ದಯಮಾಡಿ ಸರ್ಕಾರಕ್ಕೆ ಇದರ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರಿಗೆ ಮನವಿ ಮಾಡಿಕೊಂಡಿದ್ದಾರೆ.

## ಹೊಸನಗರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ....

ಹೊಸನಗರ : ಮಕ್ಕಳು ಕಲಿಕೆಯ ಅವಧಿಯಲ್ಲಿ ಸದ್ಗುಣ ಬೆಳೆಸಿಕೊಂಡು, ಉತ್ತಮ ಅಭ್ಯಾಸವನ್ನು ರೂಢಿಸಿಕೊಂಡು ಮಾದಕ ವಸ್ತುಗಳಿಂದ ದೂರ ಇರುವ ಮೂಲಕ ವಿದ್ಯಾರ್ಥಿ ಜೀವನವನ್ನು ಭವಿಷ್ಯದ ಭದ್ರ ಮೆಟ್ಟಿಲುಗಳನ್ನಾಗಿಸಿಕೊಳ್ಳುವತ್ತ ಗಮನ ಹರಿಸಬೇಕು ಎಂದು ಹೊಸನಗರ ಕುವೆಂಪು ವಸತಿ ವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯರು ಹಾಗೂ ಆಡಳಿತಾಧಿಕಾರಿಗಳಾದ ಶ್ರೀನಿವಾಸ್ ಸೊನಲೆ ಇವರು ಕಿವಿಮಾತು ಹೇಳಿದರು. ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆಯ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಮೋಜಿಗಾಗಿ ಪ್ರಾರಂಭಿಸಿದ ಅಭ್ಯಾಸ ಚಟವಾಗಿ



ರೂಪುಗೊಳ್ಳುವುದು ಬೇಡ. ಪೋಷಕರಲ್ಲಿ ದುರ್ಗುಣವಿದ್ದರೂ ಕೂಡಾ ಮಕ್ಕಳು ಅದರಿಂದ ಪ್ರಭಾವಿತರಾಗಿ ಅವರನ್ನು ಅನುಸರಿಸದೆ ದುಶ್ಚಟ, ದುರಾಭ್ಯಾಸ ಅಳವಡಿಸಿಕೊಳ್ಳದೆ ಆದರ್ಶ ವ್ಯಕಿಗಳಾಗಿ ಸಮಾಜಕ್ಕೆ ಒಳ್ಳೆಯ ಕೊಡುಗೆ ಕೊಡಿ ಎಂದು ಹೇಳಿದರು. ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ದೇವಾನಂದ ಆರ್. ಅವರು ಮಾತನಾಡಿ, ತಂದೆ ತಾಯಿಗಳ ಶ್ರಮ ವ್ಯರ್ಥ ಮಾಡದಂತೆ ಮಕ್ಕಳು ಓದಿನಲ್ಲಿ ಹೆಚ್ಚು ಆಸಕ್ತಿ ವಹಿಸಿ, ಉತ್ತಮ ಜ್ಞಾನ ಸಂಪಾದಿಸಿ ಉನ್ನತ ಹುದ್ದೆ ಕೂಡ ಅಲಂಕರಿಸಿದ ಅದೆಷ್ಟೋ ಉದಾಹರಣೆಗಳು ನಮ್ಮ ಕಣ್ಣ ಮುಂದೆ ಇದೆ. ಇದನ್ನೇ ನೀವು ಆದರ್ಶವಾಗಿರಿಸಿಕೊಂಡು ಸದಾಚಾರ ಬೆಳೆಸಿಕೊಳ್ಳುತ್ತಾ ಸದೃಢ ರಾಷ್ಟ್ರ ನಿರ್ಮಾಣದ ಸಂಕಲ್ಪ ತೊಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಸ್ವಾಮಿರಾವ್ ಅವರು ಮಾತನಾಡಿ, ಪೂಜ್ಯ ವೀರೇಂದ್ರ ಹೆಗ್ಗಡೆಯವರು ಕೈಗೊಂಡ ಸಮಾಜಮುಖಿ ಕಾರ್ಯಕ್ರಮಗಳು ಶಾಲಾ ಕಾಲೇಜಿನ ಮಕ್ಕಳಿಗೆ ಮಾದಕ ವಸ್ತು ನಿರ್ಮೂಲನೆಗೆ ದಾರಿದೀಪದಂತಿವೆ. ಕಾಲೇಜಿನ ಎಲ್ಲಾ ವಿಭಾಗಕ್ಕೂ ಇಂತಹ ಮಾಹಿತಿ ಅಗತ್ಯವಿದ್ದು, ಎಲ್ಲಾ ಮಕ್ಕಳಿಗೂ ಈ ಕುರಿತು ಮಾಹಿತಿ ಕೊಡಿಸುವ ಮೂಲಕ ಮಾದಕ ವಸ್ತು ನಿರ್ಮೂಲನೆಗೆ ಪಣ ತೊಡೋಣ ಎಂದು ಹೇಳಿದರು. ಈ ಕಾರ್ಯಕ್ರಮದ ಮೂಲಕ 98 ಮಕ್ಕಳಿಗೆ ಮಾಹಿತಿ ನೀಡಲಾಯಿತು..ಹೊಸನಗರ ವಲಯದ ಮೇಲ್ವಿಚಾರಕರಾದ ಸುಭಾಷ್ ಪ್ರಾಸ್ತಾವಿಕ ಮಾತನಾಡಿದರು. ಸೇವಾಪ್ರತಿನಿಧಿ ಸುಮತಿ ಉಪಸ್ಥಿತರಿದ್ದರು. ಉಪನ್ಯಾಸಕರಾದ ಸೀಮಾ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕರಾದ ಮಹಾಂತೇಶ್ ಮತ್ತು ಸಂತೋಷ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ವರದಿ. ತನುಜ್ ಕುಮಾರ್ ಹೊಸನಗರ....

## ಪ.ಜಾತಿ ಮತ್ತು ಪ.ಪಂಗಡಗಳ ಸಮುದಾಯದ ನೊಂದಂತಹ ವ್ಯಕ್ತಿಗಳಿಗೆ ಕಾನೂನಿನ ಬಗ್ಗೆ ತಿಳಿಸಿ

ಕೊರಟಗೆರೆ:- ಪ.ಜಾತಿ ಮತ್ತು ಪ.ಪಂಗಡಗಳ ಸಮುದಾಯದ ನೊಂದಂತಹ ವ್ಯಕ್ತಿಗಳಿಗೆ ಕಾನೂನಿನ ಬಗ್ಗೆ ತಿಳಿಸಿ ಧೈರ್ಯ ತುಂಬುವುಂತಹ ಕೆಲಸವನ್ನು ಈ ಕಾನೂನು ವೇದಿಕೆ ಮಾಡಿದೆ. ಕಾನೂನಿನ ಬಗ್ಗೆ ತಿಳಿಯದಿದ್ದರೆ ಕಷ್ಟ ಕಾಲದಲ್ಲಿ ನ್ಯಾಯ ಪಡೆದುಕೊಳ್ಳುವುದು ಅಸಾಧ್ಯ ಎಂದು ಸ್ಲಂ ಜನಾಂದೋಲನ ರಾಜ್ಯ ಸಂಚಾಲಕ ನರಸಿಂಹಮೂರ್ತಿ ತಿಳಿಸಿದರು. ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಸ್ಲಂ ಜನಾಂದೋಲನ




ಕರ್ನಾಟಕ ಪರ್ಯಾಯ ಕಾನೂನು ವೇದಿಕೆಯಿಂದ ಎಸ್ಸಿ/ ಎಸ್ಟಿ ಸಮುದಾಯಗಳ ಮೇಲಿನ ದೌರ್ಜನ್ಯದ ಅರಿವು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ. ಎಸ್ಸಿ/ಎಸ್ಟಿ ಸಮುದಾಯಗಳ ಮೇಲೆ ಇತರೆ ಸಮುದಾಯಗಳಿಂದ ನಡೆಯುತ್ತಿರುವ ದೌರ್ಜನ್ಯವನ್ನು ಖಂಡಿಸಿ ಕಾನೂನಿನ ಚೌಕಟ್ಟಿನಲ್ಲಿ ಶಿಕ್ಷೆ ಸಿಗುವಂತೆ ಮಾಡಲು ಈ ವೇದಿಕೆ ಇರುವುದು. ಗ್ರಾ.ಪಂ ಮಟ್ಟದಲ್ಲಿ ದಲಿತರನ್ನು ಜಾತಿಯ ಕಡೆಗಣನೆಯಿಂದ ಕಾಣುವುದನ್ನು ಸಮುದಾಯದ ಮುಖಂಡರು ಆರೋಪ ಮಾಡಿದ್ದಾರೆ. ಭ್ರಷ್ಠಾ ಅಧಿಕಾರಿಗಳಿಂದ ಸಮುದಾಯಕ್ಕೆ ನ್ಯಾಯ ಸಿಗದಂತಾಗಿದೆ ಎಂದು ಹೇಳಿದರು. ಗ್ರಾ.ಪಂಚಾಯಿತಿ ವ್ಯಾಪ್ತಿಗಳಲ್ಲಿ ಮಲ ಹೊರಲು ಗುತ್ತಿಗೆದಾರನ ಮುಖಾಂತರ ದಲಿತರನ್ನು ಹೆಚ್ಚಾಗಿ ಇಂತಹ ಕೆಲಸಗಳಿಗೆ ಬಳಸಿಕೊಳ್ಳುತ್ತಿದ್ದಾರೆ. ಅಂತವರಿಗೆ ಕಾನೂನಿನ ರೀತಿಯ ಶಿಕ್ಷೆಗೆ ಒಳಪಡಿಸಿ ಸಮುದಾಯಗಳಿಗೆ ನ್ಯಾಯ ದೊರಕುವಂತೆ ಮಾಡುವುದೇ ನಮ್ಮ ಗುರಿ, ಆದ್ದರಿಂದ ಇತರೆ ಸಮುದಾಯಗಳ ಶೋಷಣೆಗೆ ಒಳಗಾಗದೆ ಸಂವಿಧಾನದ ಪ್ರತಿಯೊಂದು ಕಾನೂನಿನ ಬಗ್ಗೆ ಅರಿತು ಸಮಾಜದಲ್ಲಿ ಜೀವನ ನಡೆಸುವುದನ್ನು ಕಲಿಯಬೇಕು ಎಂದು ಹೇಳಿದರು. ಹೈಕೋರ್ಟ್ ವಕೀಲ ನರಸಿಂಹಪ್ಪ ಟಿ.ವಿ ಮಾತನಾಡಿ, ಪ.ಜಾತಿ ಮತ್ತು ಪ.ಪಂಗಡಗಳ ಮೇಲೆ ಸಮಾಜದಲ್ಲಿ ದೌರ್ಜನ್ಯಗಳು ಹೆಚ್ಚಾಗುತ್ತಿವೆ. ಸರ್ಕಾರದ ವರದಿಯಲ್ಲಿ ಹೆಚ್ಚಾಗಿರುವುದೇ ಎಸ್ಸಿ/ಎಸ್ಟಿ ಪ್ರಕರಣಗಳು. ಸಮುದಾಯ ನ್ಯಾಯ ಸಿಗದಿರಲು ಅಧಿಕಾರಿಗಳ ಬೇಜಾವಬ್ದಾರಿತನ ಕಾರಣವಾಗಿದೆ. ಈ ಸಮುದಾಯಗಳಿಗೆ ಕಾನೂನಿನಲ್ಲಿರುವ ಎಲ್ಲಾ ಕಾಯ್ದೆಗಳ ಬಗ್ಗೆ ಅರಿವು ಮೂಡಿಸಲು ಪ್ರತಿ ಜಿಲ್ಲೆಯಲ್ಲಿ ಸಂಬಂಧಿಸಿದ ಎಲ್ಲಾ ತಾಲೂಕಿನ ಮುಖಂಡರನ್ನು ಒಟ್ಟುಗೂಡಿಸಿ ವರ್ಷಕ್ಕೆ 2ರಿಂದ 3ಸಭೆ ನಡೆಸಬೇಕಾಗಿರುವುದು ಜಿಲ್ಲಾಧಿಕಾರಿಗಳ ಮತ್ತು ಪೋಲಿಸ್ ವರಿಷ್ಠಾಧಿಕಾರಿಗಳ ಕರ್ತವ್ಯವಾಗಿರುತ್ತದೆ ಎಂದು ಹೇಳಿದರು. ದಲಿತ ಕುಟುಂಬದವರು ಇತರೆ ಸಮುದಾಯ ವ್ಯಕ್ತಿಗಳನ್ನು ಮದುವೆಯಾದರೆ, ದಲಿತರ ಭೂಮಿ ವಿಚಾರಕ್ಕೆ ಸಂಬಂಧಿಸಿದಂತೆ ನಡೆಯುತ್ತಿರುವ ದೌರ್ಜನ್ಯಗಳು ಪೋಲಿಸ್ ಠಾಣೆ ಮಟ್ಟಿಲೇರಿದರು ಪ್ರಭಾವಿ ವ್ಯಕ್ತಿಗಳಿಂದ ಕಾನೂನು ಅರಿಯದೆ ಇರುವಂತಹ ಮುಗ್ಧ ಜನರಿಗೆ ನ್ಯಾಯ ಸಿಗದಂತಾಗಿದೆ. ಎಲ್ಲಾ ತಾಲೂಕು ಮಟ್ಟದಲ್ಲಿ ಇಂತಹ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯಬೇಕು. ಸಮುದಾಯಗಳು ಸಹ ಕಡ್ಡಾಯವಾಗಿ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಾನೂನಿನ ಬಗ್ಗೆ ಅರಿಯುವುದು ಸೂಕ್ತವಾಗಿದೆ ಎಂದರು. ರೆಡ್ಸ್ ಸಂಸ್ಥೆ ಜಿಲ್ಲಾ ಸಂಯೋಜಕ ರಂಗಯ್ಯ ಮಾತನಾಡಿ, ಎಲ್ಲಿಯವರೆಗೂ ಕಾನೂನಿನ ಬಗ್ಗೆ ತಿಳಿಯುದಿಲ್ಲವೂ ಅಲ್ಲಿಯವರೆಗೂ ಇತರೆ ಸಮುದಾಯಗಳ ವ್ಯಕ್ತಿಗಳ ದೌರ್ಜನ್ಯವು ನಡೆಯುತ್ತಲೇ ಇರುತ್ತದೆ. ಪ್ರತಿಯೊಬ್ಬರು ಕಾನೂನಿನ ಬಗ್ಗೆ ಕನಿಷ್ಟ ಅರಿವು ಹೊಂದಿರಬೇಕು. ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಮುಖ್ಯವಾಹಿನಿಗೆ ತರಬೇಕು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಪರ್ಯಾಯ ಕಾನೂನು ವೇದಿಕೆಯ ಸಿದ್ದಾರ್ಥ್ ಜೋಷಿ, ತಿರುಮಲಯ್ಯ, ಕೃಷ್ಣಮೂರ್ತಿ, ಮನೋಜ್‌ಕುಮಾರ್, ಸೇರಿದಂತೆ ಇತರರು ಇದ್ದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಸೋಮವಾರ 24 ಜೂನ್ 2024
MONDAY 24 June 2024

# ತಾಲೂಕಿನ ಆಸ್ಪತ್ರೆಗಳಿಗೆ ಉತ್ತಮ ಸೌಲಭ್ಯ ಒದಗಿಸುವೆ ಶಾಸಕ ಉದಯ್ ಭರವಸೆ


*ಮದ್ದೂರು ಪಟ್ಟಣದ ಶ್ರೀ ಗುರುಶಾಂತಪ್ಪ ಸರ್ಕಾರಿ ಆಸ್ಪತ್ರೆಯಲ್ಲಿ ಭಾನುವಾರ ಆರೋಗ್ಯ ಕವಚ ಯೋಜನೆಯಡಿ ನೀಡಿರುವ 108 ತುರ್ತು ಚಿಕಿತ್ಸಾ ವಾಹನಕ್ಕೆ ಶಾಸಕ ಕೆ.ಎಂ.ಉದಯ್ ಚಾಲನೆ ನೀಡಿದರು. ಕದಲೂರು ರಾಮಕೃಷ್ಣ, ಡಾ.ರವೀಂದ್ರಬಿ.ಗೌಡ, ರಾಘವ, ಕೋಕಿಲ ಅರುಣ್, ಸರ್ವಮಂಗಳ, ಸಚಿನ್, ಸಿದ್ದರಾಜು ಇದ್ದರು*

ಮದ್ದೂರು: ತಾಲೂಕಿನ ಎಲ್ಲಾ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವ ಸಂಬಂಧ ಆರೋಗ್ಯ ಸಚಿವ ದಿನೇಶ್ ಗೂಂಡುರಾವ್ ಅವರೊಂದಿಗೆ ಈಗಾಗಲೇ ಚರ್ಚಿಸಲಾಗಿದ್ದು, ಹಂತ ಹಂತವಾಗಿ ಸರ್ಕಾರಿ ಆಸ್ಪತ್ರೆಗಳನ್ನು ಉನ್ನತಿಕರಿಸಲಾಗುವುದು ಎಂದು ಶಾಸಕ ಕೆ.ಎಂ.ಉದಯ್ ಭರವಸೆ ನೀಡಿದರು.

ಪಟ್ಟಣದ ಶ್ರೀ ಗುರುಶಾಂತಪ್ಪ ಸರ್ಕಾರಿ ಆಸ್ಪತ್ರೆಯಲ್ಲಿ ಭಾನುವಾರ ಆರೋಗ್ಯ ಕವಚ ಯೋಜನೆಯಡಿ ನೀಡಿರುವ 108 ತುರ್ತು ಚಿಕಿತ್ಸಾ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು.

ತಾಲೂಕು ಆಸ್ಪತ್ರೆ ಸೇರಿದಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿರುವ ಸಿಬ್ಬಂದಿ ಹಾಗೂ ಸೌಲಭ್ಯಗಳ ಕೊರತೆ ಇರುವುದು ನನ್ನ ಗಮನಕ್ಕೆ ಬಂದಿದ್ದು, ಇಲ್ಲಿಯಾ ಸಮಸ್ಯೆಗಳನ್ನು ಬಗೆ ಹರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆರೋಗ್ಯ ಸಚಿವ ದಿನೇಶ್ ಗೂಂಡುರಾವ್ ಅವರಿಗೆ ಮನವಿ ಸಲ್ಲಿಸಲಾಗಿದ್ದು, ಶೀಘ್ರವಾಗಿ ಸಮಸ್ಯೆಗಳು ಈಡೇರಲಿವೆ ಎಂದರು.

ಬೆಸಗರಹಳ್ಳಿ ಪ್ರಾಥವಿಕ ಆರೋಗ್ಯ ಕೇಂದ್ರ ಸೇರಿದಂತೆ ಇನ್ನು ಹಲವಾರು ಆಸ್ಪತ್ರೆಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಪ್ರಗತಿ ಹಂತದಲ್ಲಿದೆ. ಮುಂದಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದ ಜನರಿಗೂ ಉತ್ತಮ ಚಿಕಿತ್ಸೆ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ.ರವೀಂದ್ರ ಬಿ.ಗೌಡ, ಆರೋಗ್ಯ ನಿರೀಕ್ಷಕ ಡಾ.ತಮ್ಮೇಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕದಲೂರು ರಾಮಕೃಷ್ಣ, ಟಿಎಪಿಎಂಎಸ್ ಉಪಾಧ್ಯಕ್ಷ ಗೊರವನಹಳ್ಳಿ ರಾಘವ, ನಿರ್ದೇಶಕ ಅಡ್ಡರಸ್ತೆ ಗೋಪಿ, ಪುರಸಭಾ ಸದಸ್ಯರಾದ ಎಂ.ಬಿ.ಸಚಿನ್, ಮನೋಜ್, ಸರ್ವಮಂಗಳ, ಕೋಕಿಲಅರುಣ್, ಸಿದ್ದರಾಜು, ಮುಖಂಡರಾದ ಅವಿನಾಶ್, ಸಂತೋಷ್, ಜಯಪ್ರಕಾಶ್, ವೆಂಕಟೇಶ್ ಸೇರಿದಂತೆ ಇತರರು ಇದ್ದರು.

# ಅದ್ದೂರಿಯಾಗಿ ನಡೆದ ಪರಿಸರ ದಿನಾಚರಣೆ ಕಾರ್ಯಕ್ರಮ



ಮಾಲೂರು: ತಾಲೂಕಿನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್ ವತಿಯಿಂದ ಮಾಲೂರು ಕಸಬಾ ವಲಯದ ಮಡಿವಾಳ ಗ್ರಾಮದಲ್ಲಿ ಅರಣ್ಯ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಪರಿಸರ ದಿನಾಚರಣೆ ಕಾರ್ಯಕ್ರಮ ಮಾಡಲಾಯಿತು.

ಮಡಿವಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಗಿಡ ನಾಟಿ ಮಾಡಿ ಮಾತನಾಡಿದ ತಾಲೂಕಿನ ಕೃಷಿ ಅಧಿಕಾರಿ ಮಧುರಾಜ್ ರವರು ಸಕಲ ಜೀವ ರಾಶಿಗಳು ಭೂಮಿತಾಯಿ ತನ್ನ ಒಡಲಲ್ಲಿ ಇಟ್ಟುಕೊಂಡು ಘೋಷಣೆ ಮಾಡುತ್ತಾ ಇದ್ದಾನೆ, ಆದರೆ ಎಲ್ಲಾ ಜೀವ ಸಂಕುಲಗಳಲ್ಲಿ ಬುದ್ಧಿವಂತರೆನಿಸಿಕೊಂಡ ಮನುಷ್ಯ ಜೀವಿ ಮಾತ್ರ ತನ್ನ ದುರಾಸೆಗಾಗಿ ಹಾಗೂ ಅಭಿವೃದ್ಧಿಯ ಹೆಸರಲ್ಲಿ ಪರಿಸರವನ್ನು ನಾಶ ಮಾಡುತ್ತಿದ್ದಾನೆ, ಇದರಿಂದ ಪರಿಸರದ ಸಮತೋಲನ ತಪ್ಪಿದೆ. ಉದಾಹರಣೆಗೆ ಕಾಡುಗಳ ನಾಶದಿಂದ ವನ್ಯ ಜೀವಿಗಳು ನಾಡಿಗೆ ಬರುವಂತಾಗಿದೆ, ಮರಗಳ ಮರಣ ಹೋಮದಿಂದ ಭೂಮಿಗೆ ತಾಪಮಾನ ಏರಿಕೆ ಆಗುತ್ತದೆ, ಇದರಿಂದ ಆಕಾಲಿಕ ಮಳೆ ಪ್ರವಾಹ ಮುಂತಾದ ಪ್ರಾಕೃತಿಕ ದುರಂತಗಳು ಸಂಭವಿಸುತ್ತದೆ ವಿದ್ಯಾರ್ಥಿಗಳು ಮತ್ತು ಜನ ಸಾಮಾನ್ಯರು ಇದನ್ನು ಗಂಭೀರವಾಗಿ ತೆಗೆದುಕೊಂಡು ಪರಿಸರ ಸಂರಕ್ಷಣೆಗೆ ಇಂದಿನಿಂದಲೇ ಗಿಡ ನಾಟಿ ಮಾಡಿ ಉಳಿಸಿ ಬೆಳೆಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಮುಖ್ಯ ಶಿಕ್ಷಕರಾದ ಜಲಜಾಕ್ಷಿ ಮಾತನಾಡಿ ವಿದ್ಯಾರ್ಥಿಗಳು ಗಿಡ ಮರ ಬೆಳಸಿ ಉಳಿಸಿದರೆ ನಮಗೆ ಬೇಕಾದ ಆಮ್ಲಜನಕವನ್ನು ನೀಡುತ್ತವೆ. ಉತ್ತಮದ ಆಹಾರ, ನೀರು, ಬೆಳಕು, ಗಾಳಿ ಇವುಗಳಿಗಾಗಿ ಪರಿಸರ ಬೆಳೆಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಲಯದ ಮೇಲ್ವಿಚಾರಕರಾದ ಮಂಜುನಾಥ್, ಶಾಲೆಯ ಶಿಕ್ಷಕರಾದ ಗೀತಾ, ಸೇವ ಪ್ರತಿನಿಧಿಯಾದ ಉಮಾ, ಹಾಗೂ ಸಂಘದ ಸದಸ್ಯರು, ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ

# ಶಾಲಾ-ಕಾಲೇಜು ಆಯ್ಕೆಯಲ್ಲಿ ಎಚ್ಚರ




ಬೆಂಗಳೂರು: ದಿನಕ್ಕೊಂದು ಕಾಲೇಜು,ರಸ್ತೆಗೊಂದು ಶಾಲೆಗಳಿವೆ ಅದರಲ್ಲಿ ಯಾವುದು ಉತ್ತಮ ಎಂಬುದನ್ನು ಬಹಳ ಎಚ್ಚರಿಕೆಯಿಂದ ಪೋಷಕರು ಆಯ್ಕೆ ಮಾಡಿಕೊಂಡು ಮಕ್ಕಳನ್ನು ವಿದ್ಯಾಭ್ಯಾಸಕ್ಕೆ ತೊಡಗಿಸಬೇಕೆಂದು

ಗ್ಲೋಬಲ್ ಅಕಾಡೆಮಿ ಆಫ್ ಟೆಕ್ನಾಲಜಿ,ವ್ಯವಸ್ಥಾಪಕ ನಿರ್ದೇಶಕರಾದ ಐಶ್ವರ್ಯ ಡಿಕೆಎಸ್ ಹೆಗ್ಡೆ ಕಿವಿಮಾತು ಹೇಳಿದ್ದಾರೆ. ಪೀಣ್ಯ ದಾಸರಹಳ್ಳಿಯ ಸೌಂದರ್ಯ ಶಿಕ್ಷಣ ಸಂಸ್ಥೆಯಲ್ಲಿ ಪ್ರತಿಭಾ ಪುರಸ್ಕಾರ ಮತ್ತು ನೂತನ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು. ಕೋಟಿ ಕೋಟಿ ಹಣ ಮಾಟುವುದು ಸಾಧನೆಯಲ್ಲ, ನಮ್ಮಿಂದ ಎಷ್ಟು ಜನ ಉದ್ದಾರ ಆಗಿದ್ದಾರೆ ಎಂಬುದು ನಿಜವಾದ ಸಾಧನೆ ಎಂದು ಹೇಳಿದ ಐಶ್ವರ್ಯ ಡಿಕೆಶಿ ಅವರು,ಇತ್ತೀಚಿನ ದಿನಗಳಲ್ಲಿ ಸಂಬಂಧಗಳ ನಡುವೆ ಕಂದಕಗಳು ಹೆಚ್ಚುತ್ತಿವೆ.ಸಂಬಂಧಗಳ ಸಂಪರ್ಕ ವೃದ್ಧಿಸುವಲ್ಲಿ ಪೋಷಕರು,ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕೆಂದು ಮನವಿ ಮಾಡಿದರು. ಶಿಕ್ಷಣ ನೀಡುವುದಷ್ಟೇ ಅಲ್ಲ,ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಶಿಕ್ಷಣ ಸಂಸ್ಥೆಗಳು ಒತ್ತು ನೀಡಬೇಕಿದೆ ಎಂದು ಕರೆ ನೀಡಿದ ಐಶ್ವರ್ಯ, ಅದೃಷ್ಟ,ದುರಾದೃಷ್ಟ ಇತ್ಯಾದಿಗಳನ್ನು ಹೇಳ್ತೇವೆ,ಆದರೆ ಅವೆಲ್ಲಾ ಸುಳ್ಳು,ನಮ್ಮ ಶ್ರಮ,ಅವಕಾಶಗಳ ಸದುಪಯೋಗ ನಮ್ಮ ಜೀವನವನ್ನು ರೂಪಿಸುತ್ತವೆ ಎಂದು ಹೇಳಿದರು.

ಪಿಯುಸಿ,ನೀಟ್,ಜೆಇಇ ಪರೀಕ್ಷೆ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈದ 76 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಪ್ರೋತ್ಸಾಹಿಸಲಾಯಿತು.

ಛೇರ್ಮನ್ ಸೌಂದರ್ಯ ಪಿ ಮಂಜಪ್ಪ ಅಧ್ಯಕ್ಷತೆ ವಹಿಸಿದ್ದರು.

ಸಿಇಓ ಕೀರ್ತನ್ ಕುಮಾರ್,ವ್ಯವಸ್ಥಾಪಕ ನಿರ್ದೇಶಕರಾದ ಸುನಿತಾ ಮಂಜಪ್ಪ, ನಿರ್ದೇಶಕರಾದ ವರುಣ್ ಕುಮಾರ್, ಪ್ರತಿಕ್ಷಾ, ನಿಶ್ಮಿತಾ, ಪ್ರಿನ್ಸಿಪಾಲ್ ಮಹಾಬಲೇಶ್ವರ ತುಂಗಾ,ಕೃಪಾ,ಚಿನ್ನಮ್ಮ ಕಾವೇರಪ್ಪ,ಸಂಜೀವ್ ಸೋಲಂಕಿ ವೇದಿಕೆಯಲ್ಲಿದ್ದರು.

# ಬ್ರಿಲಿಯಂಟ್ ಶಾಲೆಯಲ್ಲಿ ಶಾಲಾ ಸಂಸತ್ ಚುನಾವಣೆ



ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ಸಮೀಪದ ಮೈಲೇಶ್ವರ ಗ್ರಾಮದಲ್ಲಿ ಭವ್ಯ ಭಾರತದ ಸಂವಿಧಾನದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಇದೆ ಹಾಗೆಯೇ ಶಾಲಾ ಹಂತದಲ್ಲಿ ವಿದ್ಯಾರ್ಥಿಗಳಲ್ಲಿ ನಾಯಕತ್ವದ ಸಹಬಾಳ್ವೆ ಹಾಗೂ ಸಮಾನತೆಯ ಗುಣ ಬೆಳೆಸಿಕೊಳ್ಳುವ ನಿಟ್ಟಿನಲ್ಲಿ ಶಾಲಾ ಸಂಸತ್ ರಚಿಸಲಾಗುತ್ತದೆ. ಇದು ದೇಶದ ಮಾದರಿ ಸಂಸತ್ತಾಗಿದೆ ಎಂದು ಬ್ರಿಲಿಯಂಟ್ ಆಂಗ್ಲ ಮಾಧ್ಯಮ ಮುಖ್ಯಗುರು ಅಭಿಲಾಷ ಹೇಳಿದರು. ಶುಕ್ರವಾರ ತಾಲೂಕಿನ ಮಲ್ಲೇಶ್ವರದ ಬ್ರಿಲಿಯಂಟ್ ಕನ್ನಡ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ ಶಾಲಾ ಸಂಸತ್ ಚುನಾವಣೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಜಾಪ್ರಭುತ್ವದ ತತ್ವ ವಿದ್ಯಾರ್ಥಿಗಳಿಗೆ ತಿಳಿಸುವ ನಿಟ್ಟಿನಲ್ಲಿ ಶಾಲೆಯಲ್ಲಿ ಶಾಲಾ ಸಂಸತ್ ರಚನೆ ಮಾಡಲು ಚುನಾವಣಾ ಪ್ರಕ್ರಿಯ ಹೆಚ್ಚುಕಟ್ಟಾಗಿ ಪಾಲಿಸುವುದರ ಜೊತೆಗೆ ಮತದಾನದ ಪ್ರಾತ್ಯಕ್ಷಿಕೆ ನೀಡಲಾಯಿತು. ಚುನಾವಣೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಶಿಕ್ಷಕ ಎಲ್.ಎಚ್.ಪಿರಂಗಿ ಪ್ರತಿಜ್ಞಾ ವಿಧಿ ಬೋಧಿಸಿದರು. ಅಶ್ವಿನಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಗುರುಮಾತೆ ಗೀತಾ ಎಸ್ ಸ್ವಾಗತಿಸಿದರು.ಕುಮಾರಿ ಆಯ್ಯ ಪ್ರದೀಪ್ ಗುರುಮಾತೆ ವಂದಿಸಿದರು. ವಿದ್ಯಾರ್ಥಿನಿಯರಾದ ಸಿಂಚನಾ ಪಾಟೀಲ್ ಹಾಗೂ ಲಕ್ಷ್ಮಿ ಕೆಂಭಾವಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ. ಬ್ರಿಲಿಯಂಟ್ ಕನ್ನಡ ಮಾಧ್ಯಮ ಮುಖ್ಯ ಗುರುಗಳು. ಶಿಕ್ಷಕ ವೃಂದ ಹಾಗೂ ಶಿಕ್ಷೆಕೇತರ ಸಿಬ್ಬಂದಿ ವರ್ಗ ಇದ್ದರು.

ವರದಿ: ಸುನೀಲ್.ಎಲ್ ತಳವಾರ ಮುಂಜಾನೆ ವಾರ್ತೆ ತಾಳಿಕೋಟಿ

# ಕಲುಷಿತ ನೀರು ಕುಡಿದು 10 ಮಂದಿ ಅಸ್ವಸ್ಥ




ಮದ್ದೂರು ತಾಲೂಕಿನ ಕೊಪ್ಪ ಹೋಬಳಿ ಬಿದರಕೋಟೆ ಗ್ರಾಮದಲ್ಲಿ ಕಲುಷಿತ ನೀರು ಸೇವನೆಯಿಂದ 10 ಕೂ ಹೆಚ್ಚು ಮಂದಿ ವಾಂತಿಬೇದಿಯಿಂದ ಅಸ್ವಸ್ಥಗೊಂಡ ಹಿನ್ನೆಲೆಯಲ್ಲಿ ಆರೋಗ್ಯಾಧಿಕಾರಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಡಾ.ಕೆ.ಮೋಹನ್, ಡಾ.ರವೀಂದ್ರಬಿ.ಗೌಡ, ಡಾ.ಬೆಟ್ಟಸ್ವಾಮಿ, ಡಾ.ಕುಮಾರ್ ಇದ್ದರು.

ಮದ್ದೂರು: ತಾಲೂಕಿನ ಕೊಪ್ಪ ಹೋಬಳಿ ಬಿದರಕೋಟೆ ಗ್ರಾಮದಲ್ಲಿ ಕಲುಷಿತ ನೀರು ಸೇವನೆಯಿಂದ 10 ಕೂ ಹೆಚ್ಚು ಮಂದಿ ವಾಂತಿಬೇದಿಯಿಂದ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿರುವ ಘಟನೆ ನಡೆದಿದೆ. ಹೀಗಾಗಿ ಗ್ರಾಮಕ್ಕೆ ಆರೋಗ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಕಾಲರಾ ಶಂಕೆ ವ್ಯಕ್ತವಾಗಿದೆ. ವಾಂತಿ ಭೇದಿಯಿಂದಾಗಿ ಗ್ರಾಮದ ಇಬ್ಬರನ್ನು ಮಂಡ್ಯ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಉಳಿದವರು ಕೊಪ್ಪದ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದಾರೆ.

ರೋಗ ಉಲ್ಬಣ ಗೂಳ್ಳದಂತೆ ಆರೋಗ್ಯ ಇಲಾಖೆ ಗ್ರಾಮದಲ್ಲಿ ಮುಂಜಾಗ್ರತೆ ಕ್ರಮ ಕೈಗೊಂಡಿದ್ದಾರೆ. ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಗ್ರಾಮದ ಆಯ್ದ ಸ್ಥಳಗಳಲ್ಲಿ ಕುಡಿಯುವ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಜಿಲ್ಲಾ ಪ್ರಯೋಗಾಲಯಕ್ಕೆ ಕಳಿಸಲಾಗಿದೆ ಅಲ್ಲದೆ ಸ್ಥಳೀಯವಾಗಿ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ತಾಲೂಕು ಆರೋಗ್ಯ ಅಧಿಕಾರಿ ಡಾ.ರವೀಂದ್ರ ಬಿ.ಗೌಡ ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಕೆ.ಮೋಹನ್. ನೋಡಲ್ ಅಧಿಕಾರಿ ಡಾ.ಬೆಟ್ಟಸ್ವಾಮಿ. ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ. ಕುಮಾರ್. ಬಿದರಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸಂಧ್ಯಾ. ಹಿರಿಯ ಆರೋಗ್ಯ ಶಿಕ್ಷಣಾಧಿಕಾರಿ ತಮ್ಮೇಗೌಡ ಹಾಗೂ ಇಲಾಖೆಯ ಸಿಬ್ಬಂದಿಗಳು ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಒತ್ತಡ ನಿವಾರಣೆಗೆ ಯೋಗ ಪರಿಣಾಮಕಾರಿ: ನಡುವಿನಮನಿ



ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ಮಾನಸಿಕ ಮತ್ತು ದೈಹಿಕ ಒತ್ತಡ ನಿವಾರಣೆಗೆ ಯೋಗ ಪರಿಣಾಮಕಾರಿ ಚಿಕಿತ್ಸೆಯಾಗಿದೆ. ಮಾನಸಿಕ ಒತ್ತಡದಲ್ಲಿ ಸಿಲುಕುವ ವಿದ್ಯಾರ್ಥಿಗಳು ವಯೋವೃದ್ಧರು ಉದ್ಯೋಗಿಗಳು ಮುಂತಾದವರಿಗೆ ಯೋಗ ಹೆಚ್ಚು ಪ್ರಯೋಜನಕಾರಿಯಾಗಿದೆ ಎಂದು ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ.ನಡುವಿನಮನಿ ಹೇಳಿದರು. ವಿಶ್ವ ಯೋಗ ದಿನಾಚರಣೆಯ ಅಂಗವಾಗಿ ಮೈಲೇಶ್ವರದ ಬ್ರಿಲಿಯಂಟ್ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಯೋಗ ದಿನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಾವಿಂದು ಯೋಗದ ಮಹತ್ವ ಮರೆಯುತ್ತಿದ್ದೇವೆ ಈ ಕಾರಣಕ್ಕಾಗಿ ಹಲವಾರು ಮಾನಸಿಕ ದೈಹಿಕ ರೋಗರು ಜಿನೆಗಳಿಂದ ಬಳಲುತ್ತಿದ್ದೇವೆ. ಇವುಗಳನ್ನು ದೂರುಕರಿಸಲು ಹಾಗೂ ಉತ್ತಮಆರೋಗ್ಯವನ್ನು ಪಡೆದುಕೊಳ್ಳಲು ಯೋಗ ಸಹಕಾರಿ ಆಗುತ್ತದೆ ಇದನ್ನು ನಾವೆಲ್ಲರೂ ಜೀವನದ ಉದ್ದಕ್ಕೂ ಪಾಲಿಸುವ ಅಗತ್ಯ ಇದೆ ಎಂದರು. ಆಂಗ್ಲ ಮಾಧ್ಯಮ ಮುಖ್ಯ ಗುರುಗಳಾದ ಅಭಿಲಾಷ ಅವರು ಮಾತನಾಡಿ ಯೋಗವು ಭಾರತದ ಅತ್ಯಂತ ಪ್ರಾಚೀನವಾದ ಒಂದು ಪದ್ಧತಿಯಾಗಿದೆ ಆದರೆ ನಾವು ಇಂದಿನ ತಾಂತ್ರಿಕ ಯುಗದಲ್ಲಿ ನಾವು ಅದನ್ನು ಮರೆತಿದ್ದೇವೆ ಅದರ ಬಹಳಷ್ಟು ಪ್ರಯೋಜನಗಳಿವೆ ಸದೃಢ ದೇಹದಲ್ಲಿ ಸದೃಢ ಮನಸ್ಸು ಇರಲು ಸಾಧ್ಯ ಇದಕ್ಕಾಗಿ ನಾವೆಲ್ಲರೂ ಯೋಗದ ಕುರಿತು ಹೆಚ್ಚು ಆಸಕ್ತಿ ವಹಿಸಬೇಕು ಇದು ರೋಗನಿರೋಧಕ ಶಕ್ತಿಯಾಗಿ ಕೆಲಸ ಮಾಡುತ್ತದೆ ಇದರಿಂದ ದೇಹದಲ್ಲಿ ಹಲವಾರು ರೋಗ ನಿರೋಧಕ ಶಕ್ತಿಗಳು ಉತ್ಪನ್ನಗೊಳ್ಳುತ್ತವೆ ಯೋಗದ ಜೊತೆಗೆ ನಮ್ಮ ದಿನನಿತ್ಯದ ಆಹಾರ ಪದ್ಧತಿಯನ್ನು ನಾವು ಅರಿತುಕೊಂಡಿರುವುದು ಉತ್ತಮ ಎಂದರು. ಈ ಕಾರ್ಯಕ್ರಮದಲ್ಲಿ ಮಾರುತಿ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷರು ಕಾರ್ಯದರ್ಶಿಗಳು ಮುಖ್ಯ ಗುರುಗಳು ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ವರದಿ: ಸುನೀಲ್ ಎಲ್ ತಳವಾರ ಮುಂಜಾನೆ ವಾರ್ತೆ ತಾಳಿಕೋಟಿ

# 5 ದಿನಗಳಲ್ಲಿ 61 ಗಾಂಜಾ ಪ್ರಕರಣ ದಾಖಲು

ಶಿವಮೊಗ್ಗ: ಜೂ.8 ರಿಂದ ಇಲ್ಲಿಯವರೆಗೆ 15 ದಿನಗಳಲ್ಲಿ ಶಿವಮೊಗ್ಗ ಜಿಲ್ಲೆಯಾದ್ಯಂತ 61 ಎನ್?ಡಿಪಿಎಸ್ ?(ಮಾದಕ ವಸ್ತುಗಳು ಹಾಗೂ ಅಮಲು ಪದಾರ್ಥಗಳ ನಿಯಂತ್ರಣ ಕಾಯ್ದೆ) ಪ್ರಕರಣಗಳನ್ನು ದಾಖಲು ಮಾಡಿಕೊಂಡಿದ್ದೇವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ.ಕೆ. ಮಿಥುನ್ ಕುಮಾರ್ ತಿಳಿಸಿದರು. ಇಂದು ಡಿಎಆರ್ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, 61 ಪ್ರಕರಣಗಳ ಪೈಕಿ 7 ಕಳ್ಳ ಸಾಗಣೆ, ಇನ್ನುಳಿದ 54 ಗಾಂಜಾ ಸೇವನೆ ಪ್ರಕರಣಗಳಿವೆ ಎಂದು ಮಾಹಿತಿ ನೀಡಿದರು.

ಇದುವರೆಗೂ 15.363 ಕೆ.ಜಿ ಗಾಂಜಾ ವಶಕ್ಕೆ ಪಡೆದುಕೊಂಡಿದ್ದೇವೆ. ತೀರ್ಥಹಳ್ಳಿಯಲ್ಲಿ ಗಾಂಜಾ ಬೆಳೆದ ಬಗ್ಗೆ ಒಂದು ಪ್ರಕರಣ ಇದೆ. ಇನ್ನುಳಿದ ಪ್ರಕರಣಗಳಲ್ಲಿ ಆರೋಪಿಗಳು ಗಾಂಜಾ ಮಾರಾಟ ಮಾಡಲು ತೆಗೆದುಕೊಂಡು ಬಂದಿರುತ್ತಾರೆ. ಪ್ರಕರಣಗಳಲ್ಲಿ ಕೆಲ ಹೊಸ ಮತ್ತು ಹಳೆಯ ಆರೋಪಿಗಳು ಇದ್ದಾರೆ. ಅವರೆಲ್ಲರನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದೇವೆ. ಶಿವಮೊಗ್ಗ ಮತ್ತು ಭದ್ರಾವತಿಯಲ್ಲಿ ಏರಿಯಾ ಡಾಮಿನೇಷನ್ ಮಾಡುತ್ತಿದ್ದೇವೆ. ಅಡ್ಡೆಗಳು, ಟೀ ಅಂಗಡಿ ಮತ್ತು ನಿರ್ಜನ ಪ್ರದೇಶಗಳಲ್ಲಿ ರಾತ್ರಿ 11ರ ಮೇಲೆ ಇರುವ ಯುವಕರ ವಿರುದ್ಧ ಪಿಟಿಕೇಸ್ ಹಾಕಿ, ಗಾಂಜಾ ಸೇವನೆಯ ಬಗ್ಗೆ ಪರೀಕ್ಷೆಗೆ ಒಳಪಡಿಸಿದ್ದೇವೆ ಎಂದು ತಿಳಿಸಿದರು. ಸುಮಾರು 450 ಯುವಕರನ್ನು ಪರೀಕ್ಷೆಗೆ ಒಳಪಡಿಸಿದಾಗ 54 ಯುವಕರಲ್ಲಿ ಗಾಂಜಾ ಪಾಸಿಟಿವ್ ಬಂದಿದೆ. ಸಾರ್ವಜನಿಕರು ತಮ್ಮ ಸುತ್ತಮುತ್ತ ಗಾಂಜಾ ಸೇವನೆ, ಮಾರಾಟ ಮಾಡುತ್ತಿರುವುದು ಕಂಡುಬಂದರೆ ಪೊಲೀಸರಿಗೆ ಗಮನಕ್ಕೆ ತನ್ನಿ. ನಮ್ಮ ಇಲಾಖೆ ಗಾಂಜಾ ಮಾರಾಟದ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತಿದೆ ಎಂದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಸೋಮವಾರ 24 ಜೂನ್ 2024
MONDAY 24 June 2024

# ಚುನಾವಣೋತ್ತರ ಸಮೀಕ್ಷೆ ನಷ್ಟದ ವ್ಯವಹಾರ

ನವದೆಹಲಿ: ಚುನಾವಣೋತ್ತರ ಸಮೀಕ್ಷೆಗಳು ನಷ್ಟದ ವ್ಯವಹಾರವಾಗಿವೆ ಎಂದು ಆಕ್ಸಿಸ್ ಮೈ ಇಂಡಿಯಾ ಮುಖ್ಯಸ್ಥ ಪ್ರದೀಪ್ ಗುಪ್ತಾ ಹೇಳಿದ್ದಾರೆ. ಸಮೀಕ್ಷೆ ನಡೆಸುವ ಸಂಸ್ಥೆಗೆ ಒಂದಿಷ್ಟು ಪ್ರಚಾರ ಸಿಗುತ್ತದೆ ಎಂಬುದನ್ನು ಬಿಟ್ಟರೆ ಬೇರೆ ಯಾವ ಲಾಭವೂ ಇದರಿಂದ ಸಿಗುವುದಿಲ್ಲ ಎಂದು ಅವರು ಅಚ್ಚರಿಯ ಮಾಹಿತಿ ಬಹಿರಂಗಪಡಿಸಿದ್ದಾರೆ. ಗುಪ್ತಾ ಅವರನ್ನು ಜೂನ್ 4 ರವರೆಗೆ ಚುನಾವಣೋತ್ತರ ಸಮೀಕ್ಷೆಗಳ ಪೋಸ್ಟರ್ ಬಾಯ್ ಎಂದು ಪರಿಗಣಿಸಲಾಗಿತ್ತು. ಆದರೆ ಫಲಿತಾಂಶಗಳು ಪ್ರಕಟವಾಗುತ್ತಿದ್ದಂತೆಯೇ ಎಲ್ಲಾ ಚುನಾವಣೋತ್ತರ ಸಮೀಕ್ಷೆಗಳು ಹುಸಿಯಾಗಿದ್ದವು. ಇದು ಸಮೀಕ್ಷೆಗಳ ವಿಶ್ವಾಸಾರ್ಹತೆಗೆ ಭಾರಿ ದೊಡ್ಡ ಹೊಡೆತ ನೀಡಿತು.

ಪಿಟಿಐನ ಪ್ರಧಾನ ಕಚೇರಿಯಲ್ಲಿ ಪಿಟಿಐ ಸಂಪಾದಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಗುಪ್ತಾ, ತಮ್ಮ ಗ್ರಾಹಕರ ಪೈಕಿ ಶೇಕಡಾ 70 ರಷ್ಟು ಕಾರ್ಪೊರೇಟ್ ಗ್ರಾಹಕರಾಗಿದ್ದು, ಅವರೇ ಆದಾಯದ ಮುಖ್ಯ ಮೂಲವಾಗಿದ್ದಾರೆ ಎಂದು ಹೇಳಿದರು. "ನಾವು ಸಮೀಕ್ಷೆಗಾಗಿ ಮಾಡುವ ಇತರ ಖರ್ಚುಗಳನ್ನು ಹೊರತುಪಡಿಸಿ, ನಿಖರವಾದ ಮಾಹಿತಿ ಪಡೆಯುವುದಕ್ಕಾಗಿ ಸಮೀಕ್ಷೆಯಲ್ಲಿ ಪಾಲ್ಗೊಂಡ ಪ್ರತಿಯೊಬ್ಬರಿಗೂ 500 ರೂಪಾಯಿ ಪಾವತಿಸುತ್ತೇವೆ. ಕಳೆದ ಬಾರಿಯ ಚುನಾವಣೆಯಲ್ಲಿ ನಾವು 3605 ವಿಧಾನಸಭಾ ಕ್ಷೇತ್ರಗಳಲ್ಲಿ ಸಮೀಕ್ಷೆ ಮಾಡಿದ್ದೇವೆ" ಎಂದು ಗುಪ್ತಾ ತಿಳಿಸಿದರು.



"ನಮ್ಮ ಸಮೀಕ್ಷೆಗಳು ನಿಖರವಾಗಿದ್ದರೂ ಕೂಡ ಅದಕ್ಕಾಗಿ ಖರ್ಚು ಮಾಡಿದ ಹಣವೇನೂ ನಮಗೆ ವಾಪಸ್ ಸಿಗುವುದಿಲ್ಲ. ಆದರೆ ನಮ್ಮ ಕಂಪನಿಯ ಬ್ರಾಂಡ್ ಮೌಲ್ಯ ಹೆಚ್ಚಾಗುತ್ತದೆ. ನಾವು ಹಣಕಾಸಿನ ರೂಪದಲ್ಲಿ ನಷ್ಟ ಅನುಭವಿಸಿದರೂ ಪ್ರಚಾರದ ವಿಷಯದಲ್ಲಿ ಉತ್ತಮ ಲಾಭವನ್ನೇ ಪಡೆಯುತ್ತೇವೆ" ಎಂದು ಅವರು ಮಾಹಿತಿ ನೀಡಿದರು.

ಪ್ರಸ್ತುತ ಕಾರ್ಯಾಚರಣೆಯಲ್ಲಿರುವ ಇತರ ವ್ಯವಹಾರಗಳು ಲಾಭದಾಯಕವಾದ ನಂತರ ತಮ್ಮ ಕಂಪನಿಯು ಷೇರು ಮಾರುಕಟ್ಟೆಯಲ್ಲಿ ಲಿಸ್ಟ್? ಆಗಲಿದೆ ಎಂದು ಗುಪ್ತಾ ಹೇಳಿದರು.

ಮಧ್ಯಪ್ರದೇಶದ ಬಾಲಾಘಾಟ್?ನ ವಾರಸಿಯೋನಿ ಎಂಬ ಹಳ್ಳಿಯಲ್ಲಿ ಜನಿಸಿದ ಗುಪ್ತಾ, ದೆಹಲಿಯ ಥಾಮ್ಸನ್ ಪ್ರೆಸ್?ನಲ್ಲಿ ಕೆಲಸ ಮಾಡಿದ ನಂತರ 1993 ರಲ್ಲಿ ಜಾಹೀರಾತು ಏಜೆನ್ಸಿಯಲ್ಲಿ ಕೆಲಸ ಮಾಡಲು ಮುಂಬೈಗೆ ತೆರಳಿದರು. ನಂತರ ಅವರು ಹಾರ್ವರ್ಡ್ ಬಿಸಿನೆಸ್ ಸ್ಕೂಲ್?ನಲ್ಲ ಅಧ್ಯಯನ ಮಾಡಿ ಭಾರತಕ್ಕೆ ಮರಳಿದ ನಂತರ 2013 ರಲ್ಲಿ ಸಮೀಕ್ಷೆಕಾರರಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು. 65 ಚುನಾವಣೆಗಳಲ್ಲಿ 60 ಚುನಾವಣೆಗಳನ್ನು ನಿಖರವಾಗಿ ಊಹಿಸಿದ್ದೇನೆ ಎಂದು ಗುಪ್ತಾ ಹೇಳಿದರು.

"ನೀರು ಹಾಗೂ ಕರೆಂಟ್? ಬಿಲ್?ಗಳ ಮೇಲೆ ಮುದ್ರಿಸಿ ಜಾಹೀರಾತುಗಳನ್ನು ಪ್ರಚಾರ ಮಾಡಿದವರಲ್ಲಿ ನಾನು ಮೊದಲಿಗನಾಗಿದ್ದೆ ಮತ್ತು ಆ ಸಮಯದಲ್ಲಿ ಈ ಕಲ್ಪನೆಯು ತುಂಬಾ ಲಾಭದಾಯಕವೆಂದು ಸಾಬೀತಾಯಿತು" ಎಂದು 55 ವರ್ಷದ ಗುಪ್ತಾ ಹೇಳಿದರು.

2024ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮೈತ್ರಿಕೂಟಕ್ಕೆ 361–401 ಸ್ಥಾನಗಳು ಮತ್ತು ಪ್ರತಿಪಕ್ಷ ಐಎನ್?ಡಿಐಎ ಮೈತ್ರಿಕೂಟಕ್ಕೆ 131–166 ಸ್ಥಾನಗಳು ಸಿಗಲಿವೆ ಎಂದು ಆಕ್ಸಿಸ್ ಮೈ ಇಂಡಿಯಾ ಭವಿಷ್ಯ ನುಡಿದಿತ್ತು. ಆದರೆ ಈ ಭವಿಷ್ಯ ಬಹುತೇಕ ಹುಸಿ ಎಂದು ಸಾಬೀತಾದವು.

# ನೂತನ ಲಯನ್ಸ್ ಕ್ಲಬ್ ಭವನ ಉದ್ಘಾಟನೆ



ಆಲೂರು: ಪಟ್ಟಣದ ಬಿಕ್ಕೋಡು ರಸ್ತೆಯಲ್ಲಿ ನೂತನ ಸಭಾಂಗಣ ಹಾಗೂ ಭವನವನ್ನು ಹೆಚ್.ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಜಗದೀಶ್ ಕಬ್ಬಿನಹಳ್ಳಿ ಅವರು ಉದ್ಘಾಟಿಸಿದರು.

ಭವನವನ್ನು ಉದ್ಘಾಟಿಸಿ ನಂತರ ಮಾತನಾಡಿದ ಜಗದೀಶ್ ಕಬ್ಬಿನಹಳ್ಳಿ ಅವರು ಆಲೂರಿನಲ್ಲಿ ಎಲ್ಲಾ ಸದಸ್ಯರ ಸಮ್ಮುಖದಲ್ಲಿ ಉತ್ತಮವಾದಂತಹ ಸುಸಜ್ಜಿತ ಭವನವನ್ನು ನಿರ್ಮಿಸಿರುವುದು ಶ್ಲಾಘನೀಯ,

ಜೊತೆಗೆ ನಿವೇಶನ ಜಾಗವನ್ನು ಲಯನ್ಸ್ ಟ್ರಸ್ಟ್ ಕಾರ್ಯಕಾರಿ ಮಂಡಳಿ ಅಧ್ಯಕ್ಷರಾದ ರೇಣುಕಾಪ್ರಸಾದ್ ಅವರು ನೀಡಿದ್ದಾರೆ,ಹಾಗೂ ಅನೇಕ ಸದಸ್ಯರು ದೇಣಿಗೆಯನ್ನು ನೀಡಿ ಉತ್ತಮವಾದ ಭವನ ನಿರ್ಮಿಸಿದ್ದೀರಿ,ಮುಂದಿನ ದಿನಗಳಲ್ಲಿ ಭವನದ ಪೂರ್ಣ ಕಾರ್ಯಕ್ಕಾಗಿ ಎರಡು ಲಕ್ಷ ನೀಡುವುದಾಗಿ ತಿಳಿಸಿದರು.

ನೂತನ ಲಯನ್ಸ್ ಕ್ಲಬ್ ಭವನದಲ್ಲಿ ಸಭೆಸಮಾರಂಭ , ಜನಸಾಮಾನ್ಯರಿಗೆ ಆರೋಗ್ಯ ತಪಾಸಣೆ ಹಾಗೂ ಇನ್ನಿತರ ಸಮಾಜಮುಖಿ ಕೆಲಸಕ್ಕೆ ಅನುಕೂಲವಾಗಲೆಂದು ಭವನದ ನಿವೇಶನದ ಜಾಗವನ್ನು ಕೊಡುಗೆಯಾಗಿ ನೀಡಿದ್ದೇನೆ,

ಮುಂದಿನ ದಿನಗಳಲ್ಲಿ ಉನ್ನತ ಮಟ್ಟದಲ್ಲಿ ಲಯನ್ಸ್ ಕ್ಲಬ್ ಸಾಧನೆಗೆ ಎಲ್ಲಾ ಸದಸ್ಯರು ಒಟ್ಟಾಗಿ ಸಹಕರಿಸೋಣ ಎಂದು ಶ್ರೀ ಲಯನ್ಸ್ ಟ್ರಸ್ಟ್ ಕಾರ್ಯಕಾರಿ ಮಂಡಳಿ ಅಧ್ಯಕ್ಷರಾದ ಲ"ರೇಣುಕಾಪ್ರಸಾದ್ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂಧರ್ಭದಲ್ಲಿ ಟಿ.ಎ.ಪಿ.ಸಿ.ಎಂ.ಎಸ್ ನಿರ್ದೇಶಕರಾದ ಶ್ರೀಮತಿ ಪವಿತ್ರಜಗದೀಶ್.ಲಿಂಗಾಯತ–ವೀರಶೈವ ಸಮಾಜ ತಾಲ್ಲೂಕು ಅಧ್ಯಕ್ಷರಾದ ರೇಣುಕಾಪ್ರಸಾದ್.ಕಾಂಗ್ರೇಸ್ ಮುಖಂಡರಾದ ಶಾಂತಕೃಷ್ಣ.ತಾಲ್ಲೂಕು ಬಿಜೆಪಿ ಅಧ್ಯಕ್ಷರಾದ ಶ್ರೀಮತಿ ಉಮಾರವಿಕುಮಾರ್.ಲೇಔಟ್ ಮಾಲಿಕರಾದ ಚಿದಾನಂದ್.ಸೆಸ್ಕಂ ಇಂಜಿನೀಯರ್ ಎನ್.ಡಿ.ಕುಮಾರ್.ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ರಿ) ತಾಲ್ಲೂಕು ಅಧ್ಯಕ್ಷರಾದ ಧರಣೇಂದ್ರ ಹೆಚ್.ಎಂ.ಕಾರ್ಯನಿರತ ಪತ್ರಕರ್ತರ ತಾಲ್ಲೂಕು ಅಧ್ಯಕ್ಷರಾದ ಪೃಥ್ವಿರಾಮ್.ಆಟೋ ಚಾಲಕ ಸಂಘದ ಅಧ್ಯಕ್ಷರಾದ ಭೈರೇಶ್.ಲಯನ್ಸ್ ಕಾರ್ಯಕಾರಿ ಮಂಡಳಿಯ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

## ವಿಭಜನೆಯಾಗಿದ್ದ ರೈತ ಸಂಘ ಒಗ್ಗಟ್ಟಾಗಲಿದೆ

# ಶಾಸಕ ದರ್ಶನ್ ಪುಟ್ಟಣ್ಣಯ್ಯ

ಮದ್ದೂರು: ಹಲವು ಕಾರಣಗಳಿಂದ ವಿಭಜನೆಯಾಗಿದ್ದ ರೈತ ಸಂಘವನ್ನು ಒಟ್ಟುಗೂಡಿಸುವ ಕೆಲಸ ಮಾಡಲಾಗುತ್ತಿದ್ದು ಮುಂದಿನ ದಿನಗಳಲ್ಲಿ ಎಲ್ಲಾ ಬಣಗಳನ್ನು ಒಗ್ಗೂಡಿಸಿ ಐಕ್ಯತಾ ಹೋರಾಟವನ್ನು ರೂಪಿಸಲಾಗುವುದು ಎಂದು ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭಾನುವಾರ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಆಯೋಜಿಸಿದ್ದ ಪೂರ್ಣ ಪ್ರಮಾಣದ ತಾಲೂಕು ಸಮಿತಿ ಸಭೆ ಹಾಗೂ ಐಕ್ಯತಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ನಾನಾ ಕಾರಣಗಳಿಂದ ರೈತ ಸಂಘವು ಒಡೆದು ಹೋಳಾಗಿ ಹಂಚಿಹೋಗಿತ್ತು. ಆದರೆ, ಎಲ್ಲಾ ರೈತ ಮುಖಂಡರು ಒಂದೇ ತತ್ವ ಸಿದ್ದಾಂತದಡಿ ರೈತರ ಹಾಗೂ ಸಾರ್ವಜನಿಕರು ಪರವಾಗಿ ಉತ್ತಮವಾಗಿ ಕೆಲಸ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಆದ್ದರಿಂದ, ಎಲ್ಲರೂ ಎಲ್ಲಾ ಬಿನ್ನಾಭಿಪ್ರಾಯಗಳನ್ನು ಮರೆತು ಎಲ್ಲಾ ರೈತ ಸಂಘಗಳ ಬಣಗಳು ಒಂದಾಗಿ ಮುನ್ನಡೆಯಬೇಕಾದ ಅವಶ್ಯಕತೆ ಇದೆ ಎಂದರು. ರೈತ ಪರ ಹೋರಾಟಗಾರರಾದ ಪ್ರೊ.ಎಂ.ಡಿ.ನಂಜುಂಡಯಸ್ವಾಮಿ ಹಾಗೂ ಕೆ.ಎಸ್.ಪುಟ್ಟಣ್ಣಯ್ಯ ಅವರ ಆಶಯ ಮತ್ತು ಕನಸುಗಳು ಈಡೇರಬೇಕಾದರೆ ನಾವೆಲ್ಲರು ಒಗ್ಗಟ್ಟಾಗುವುದು ಅನಿವಾರ್ಯ. ರೈತರ ಚಳವಳಿಗೆ ತನ್ನದೆಯಾದ ಇತಿಹಾಸವಿದ್ದು, ಆ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಬೇಕಾಗಿರುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ರೈತ ಮುಖಂಡರಿಗೆ ಕಿವಿ ಮಾತು ಹೇಳಿದರು. ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ರಾಜೇಗೌಡ, ಜಿಲ್ಲಾಧ್ಯಕ್ಷ ಎ.ಎಲ್.ಕೆಂಪೂಗೌಡ, ಮುಖಂಡರಾದ ಕೆ.ಆರ್.ಪೇಟೆ ಜಯರಾಮು, ಕೆನ್ನಾಳು ನಾಗರಾಜು, ಜಿ.ಎ.ಶಂಕರ್, ಲಿಂಗಪ್ಪಾಜಿ, ಜವರೇಗೌಡ, ಬೋರಾಪುರ ಶಂಕರೇಗೌಡ, ರಾಮಲಿಂಗಯ್ಯ, ರೇವಣ್ಣ, ವಿನೋದ್ ಬಾಬು, ಗೊಲ್ಲರದೊಡ್ಡಿ ಅಶೋಕ. ವರದರಾಜು, ಶೆಟ್ಟಹಳ್ಳಿ ರವಿಕುಮಾರ್, ಶಿವರಾಮು, ವಕೀಲ ಜಿ.ಎಸ್. ಸತ್ಯ, ವಳಗೆರಹಳ್ಳಿ ಅಲೋಕ, ಶಿವಕುಮಾರ್, ಶಶಿ, ಶ್ರೀನಿವಾಸ್, ಆಬಲವಾಡಿ ಪುಟ್ಟಸ್ವಾಮಿ, ಕೃಷ್ಣ, ಮಾಯಿಗಣ್ಣ, ಹೊಸಹಳ್ಳಿ ರವಿ ಸೇರಿದಂತೆ ಇತರರು ಇದ್ದರು.



*ಮದ್ದೂರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಆಯೋಜಿಸಿದ್ದ ಪೂರ್ಣ ಪ್ರಮಾಣದ ತಾಲೂಕು ಸಮಿತಿ ಸಭೆ ಹಾಗೂ ಐಕ್ಯತಾ ಸಭೆಯಲ್ಲಿ ಮೇಲುಕೋಟೆ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾತನಾಡಿದರು. ರಾಜೇಗೌಡ, ಕೆಂಪೂಗೌಡ, ಜವರೇಗೌಡ, ಜಯರಾಮು, ನಾಗರಾಜು ಸೇರಿದಂತೆ ಇತರರು ಇದ್ದರು.*

# ಕೆ. ಬೆಳ್ಳೂರು ಗ್ರಾಮದಲ್ಲಿ ಡೆಂಗ್ಯೂ ಜ್ವರ ಪತ್ತೆ

ಮದ್ದೂರು: ತಾಲೂಕಿನ ಕೆ.ಬೆಳ್ಳೂರು ಗ್ರಾಮದಲ್ಲಿ ಮೂರು ಮಂದಿಗೆ ಡೆಂಗ್ಯೂ ಜ್ವರ ಕಾಣಿಸಿಕೊಂಡಿದೆ. ಗ್ರಾಮದ ಪ್ರಸನ್ನ ಕುಮಾರ್ ಹಾಗೂ ಆತನ ಇಬ್ಬರ ಮಕ್ಕಳಲ್ಲಿ ಕಳೆದ ನಾಲ್ಕು ದಿನಗಳಿಂದ ಡೆಂಗ್ಯೂ ಜ್ವರ ಇರುವುದು ಪತ್ತೆಯಾಗಿದೆ. ಬೆಂಗಳೂರಿನಲ್ಲಿ ವಾಸವಾಗಿದ್ದ ಪ್ರಸನ್ನ ಕುಮಾರ್ ಹಾಗೂ ಆತನ ಇಬ್ಬರ ಮಕ್ಕಳು ಕಾರ್ಯಕ್ರಮದ ನಿಮಿತ್ತ ಕೆ.ಬೆಳ್ಳೂರು ಗ್ರಾಮಕ್ಕೆ ಬಂದಿದ್ದರು. ಈ ವೇಳೆ ಇವರಿಗೆ ಡೆಂಗ್ಯೂ ಜ್ವರ ಇರುವುದು ದೃಢಪಟ್ಟಿದೆ.

ಜ್ವರಕ್ಕೆ ತುತ್ತಾಗಿರುವ ಎಲ್ಲರೂ ಮದ್ದೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದು ಕೊಳ್ಳುತ್ತಿದ್ದಾರೆ.

ಗ್ರಾಮದಲ್ಲಿ ಇನ್ನೂ ಹೆಚ್ಚಿನ ಜ್ವರದ ಪ್ರಕರಣಗಳು ಇರಬಹುದು ಎಂಬ ಶಂಕೆ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗಳು ಲಾರ್ವ ಸಮೀಕ್ಷೆ ಕೈಗೊಂಡಿದ್ದಾರೆ. ತಾಲೂಕಿನ ಸಿ.ಎ.ಕೆರೆ. ಕಸಬಾ. ಕೊಪ್ಪ ಹಾಗೂ ಆತಗೂರು ಹೋಬಳಿಯ ಒಟ್ಟು 320 ಗ್ರಾಮಗಳಲ್ಲಿ ಇದುವರೆಗೆ 32 ಡೆಂಗ್ಯೂ ಜ್ವರದ ಪ್ರಕರಣಗಳು ಪತ್ತೆಯಾಗಿವೆ.

ತಾಲೂಕು ಆರೋಗ್ಯ ಇಲಾಖೆ. ಪ್ರಾಥಮಿಕ ಆರೋಗ್ಯ ಕೇಂದ್ರದ ಸುರಕ್ಷಾ ಅಧಿಕಾರಿಗಳು. ಆಶಾ ಕಾರ್ಯಕರ್ತೆಯರು ಪ್ರತಿ ದಿನ ಮನೆಮನೆಗಳಿಗೆ ಭೇಟಿ ನೀಡಿ ಜ್ವರ ಲಕ್ಷಣಗಳ ಬಗ್ಗೆ ಮಾಹಿತಿ ಸಂಗ್ರಹಿಸುವ ಕಾರ್ಯದಲ್ಲಿ ತೊಡಗಿದ್ದು.

ಡೆಂಗ್ಯೂ ಪ್ರಕರಣಗಳು ಉಲ್ಬಣಗೊಳ್ಳದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ ಎಂದು ತಾಲೂಕು ಆರೋಗ್ಯ ಅಧಿಕಾರಿ ಡಾ.ರವೀಂದ್ರ ಬಿ.ಗೌಡ ತಿಳಿಸಿದರು.



*ಮದ್ದೂರು ತಾಲೂಕು ಕೆ. ಬೆಳ್ಳೂರು ಗ್ರಾಮದಲ್ಲಿ ಡೆಂಗ್ಯೂ ಜ್ವರ ಪ್ರಕರಣದ ಹಿನ್ನೆಲೆಯಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ರವಿಂದ್ರಬಿ.ಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿ ಪಡೆದುಕೊಂಡರು*

# ಸರಳ ಜೀವನಕ್ಕೆ ಸಾಮಾಜಿಕ ನಾಟಕಗಳು ಸಹಕಾರಿ

ಮದ್ದೂರು: ಸಾಮಾಜಿಕ ನಾಟಕಗಳು ಮಾನವನ ಬದುಕಿನ ಭಾವನೆಗಳನ್ನು ಬಿಂಬಿಸುತ್ತವೆ. ಸರಳ ಮತ್ತು ಸುಖ ಜೀವನವನ್ನು ನಡೆಸಲು ಸಾಮಾಜಿಕ ನಾಟಕಗಳು ಪ್ರೇರಣೆ ಯಾಗಿವೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷ ವಳಗೆರೆಹಳ್ಳಿ ವಿ.ಸಿ. ಉಮಾಶಂಕರ ಹೇಳಿದರು.

ಪಟ್ಟಣದ ಹಳೆ ಬಸ್ ನಿಲ್ದಾಣದ ಆವರಣದಲ್ಲಿ ರಾಜ್ಯ ಮಟ್ಟದ ಸಾಮಾಜಿಕ ನಾಟಕ ನಿರ್ದೇಶಕರ ಟ್ರಸ್ಟ್, ಸಿ.ಎ.ಕೆರೆ ಹೋಬಳಿ ರಂಗಭೂಮಿ ಕಲಾವಿದರ ಸಂಘ, ರಂಗಭೂಮಿ ಚಾರಿಟಬಲ್ ಟ್ರಸ್ಟ್, ಸುಮುಖ ಸೇವಾ ಟ್ರಸ್ಟ್ ಮತ್ತು ಕುವೆಂಪು ಸಾಂಸ್ಕೃತಿಕ ಸಂಘದ ಸಂಯುಕ್ತಶ್ರಾಯದಲ್ಲಿ ಭಾನುವಾರ ಆಯೋಜಿಸಿದ್ದ ರತ್ನ ಮಾಂಗಲ್ಯ ಸಾಮಾಜಿಕ ನಾಟಕ ಪ್ರದರ್ಶನ ಮತ್ತು ಪ್ರತಿಭಾವಂತ ರಂಗಭೂಮಿ ಕಲಾವಿದೆ ಬೆಂಗಳೂರು ಅನುಶ್ರೀ ಅವರನ್ನು ಅಭಿನಂದಿಸಿ ಮಾತನಾಡಿದರು.



*ಮದ್ದೂರು ಪಟ್ಟಣದ ಹಳೆ ಬಸ್ ನಿಲ್ದಾಣದ ಆವರಣದಲ್ಲಿ ವಿವಿಧ ಸಂಘಟನೆಗಳ ಆಶ್ರಯದಲ್ಲಿ ಆಯೋಜಿಸಿದ್ದ ರತ್ನ ಮಾಂಗಲ್ಯ ಸಾಮಾಜಿಕ ನಾಟಕ ಪ್ರದರ್ಶನದಲ್ಲಿ ಪ್ರತಿಭಾವಂತ ಮಹಿಳಾ ಕಲಾವಿದೆ ಬೆಂಗಳೂರು ಅನುಶ್ರೀ ಅವರನ್ನು ಅಭಿನಂದಿಸಲಾಯಿತು. ವಳಗೆರಹಳ್ಳಿ ವಿ.ಸಿ. ಉಮಾಶಂಕರ, ಬೆಳಕೆರೆ ಕೆಂಪೇಗೌಡ, ತೊರೆಚಾಕನಹಳ್ಳಿ ಶಂಕರೇಗೌಡ, ತೈಲೂರು ಸಿದ್ದರಾಜು ಸೇರಿದಂತೆ ಇತರರು ಇದ್ದಾರೆ.*

ಸಾಮಾಜಿಕ ನಾಟಕಗಳು ನಿಜ ಜೀವನದಲ್ಲಿ ನಡೆಯುವ ಘಟನೆಗಳನ್ನು ಆದರಿಸಿರುತ್ತವೆ. ಪ್ರತಿಯೊಬ್ಬರು ಸಾಮಾಜಿಕ ನಾಟಕಗಳನ್ನು ವೀಕ್ಷಣೆ ಮಾಡುವುದರಿಂದ ಮನಸ್ಸಿಗೆ ಉಲ್ಲಾಸವಾಗುವುದರ ಜೊತೆಗೆ ಉತ್ತಮ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ.

ಅಂತಹ ಶಕ್ತಿ ರಂಗ ಕಲೆ ಬಿಟ್ಟು ಪ್ರತಿಯೊಬ್ಬರೂ ನಾಟಕಗಳನ್ನು ನೋಡುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ರಾಜ್ಯ ನಾಟಕ ನಿರ್ದೇಶಕರ ಸಂಘದ ರಾಜ್ಯಾಧ್ಯಕ್ಷ ಬೆಳಕೆರೆ ಕೆಂಪೇಗೌಡ ಅವರು ಪ್ರತಿಭಾವಂತ ಮಹಿಳಾ ರಂಗಭೂಮಿ ಕಲಾವಿದೆ ಬೆಂಗಳೂರು ಅನುಶ್ರೀ ಅವರನ್ನು ಅಭಿನಂದಿಸಿ ಮಾತನಾಡಿ, ಅನುಶ್ರೀ ಅವರು ನೂರಾರು ನಾಟಕಗಳಲ್ಲಿ ಅಭಿನಯಿಸುವ ಮೂಲಕ ಗಮನ ಸೆಳೆದಿದ್ದಾರೆ. ಅತ್ಯಂತ ಪ್ರತಿಭಶಾಲಿ ಕಲಾವಿದೆಯಾಗಿರುವ ಅನುಶ್ರೀ ಅವರು ಇನ್ನಷ್ಟು ಎತ್ತರಕ್ಕೆ ಬೆಳೆಯುವ ಮತ್ತು ಹಲವು ಜನಪರ ಸಾಮಾಜಿಕ ನಾಟಕಗಳಲ್ಲಿ ಅಭಿನಯಿಸುವ ಮೂಲಕ ಕನ್ನಡ ನಾಡಿನ ಜನರ ಮನ ಗೆಲ್ಲುವಂತಾಗಲಿ. ನಾಟಕಗಳಲ್ಲಿ ತಲ್ಲಿನರಾಗಿ ಅನುಶ್ರೀ ಅವರು ಅಭಿನಯಿಸುತ್ತಾರೆ. ಪ್ರೇಕ್ಷಕರು ಅವರ ನಟನೆಯನ್ನು ನೋಡಲು ಕಾತುರರಾಗಿರುತ್ತಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯ ನಾಟಕ ನಿರ್ದೇಶಕರ ಸಂಘದ ರಾಜ್ಯಾಧ್ಯಕ್ಷ ಬೆಳಕೆರೆ ಕೆಂಪೇಗೌಡ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿ.ಸಿ. ಉಮಾಶಂಕರ, ಸಂಘಟಕರಾದ ತೊರೆಚಾಕನಹಳ್ಳಿ ಶಂಕರೇಗೌಡ, ತೈಲೂರು ಸಿದ್ದರಾಜು, ಪ್ರಾಂಶುಪಾಲ, ಕುಂದನಕುಪ್ಪೆ ಕುಮಾರ್, ಹುಣಸೆಮರದದೊಡ್ಡಿ ಸ್ವಾಮಿ, ಚಾಮನಹಳ್ಳಿ ಮಂಜು ಸೇರಿದಂತೆ ಇತರರು ಇದ್ದರು.

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH